ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ
ದಾವಣಗೆರೆ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

# ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು | ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ | EDITOR : S VENKATESULU

ಸಂಪುಟ : 01 ಸಂಚಿಕೆ : 66 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 18-09-2026 ಪುಟ : 04 ಬೆಲೆ : 2-00

## ಬೆಂಗಳೂರು ಕಿರೀಟ, ಕಲ್ಯಾಣ ಕರ್ನಾಟಕ ಶಕ್ತಿ ಪೀಠ: ಡಿಕೆಶಿ

ಕಲಬುರಗಿ: ಬೆಂಗಳೂರು ಕರ್ನಾಟಕದ ಕಿರೀಟವಾದರೆ, ಬಸವಣ್ಣನ ಕರ್ಮಭೂಮಿ, ಸಾಮಾಜಿಕ ಕ್ರಾಂತಿಯ ನೆಲವಾದ ಕಲ್ಯಾಣ ಕರ್ನಾಟಕ ಭಾಗವು ನಾಡಿನ ಶಕ್ತಿ ಪೀಠವಿದ್ದಂತೆ. ಕಲ್ಯಾಣದ ನಿಜ ಕಲ್ಯಾಣವೇ ನಮ್ಮ ಸರ್ಕಾರದ ಮೂಲ ಮಂತ್ರವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಪ್ರಯುಕ್ತ ರಾಷ್ಟ್ರಧ್ವಜಾರೋಹಣ ನೆರವೇರಿಸಿದ ನಂತರ ಪರೇಡ್ ವೀಕ್ಷಣೆ ಮಾಡಿ, ವಿವಿಧ ತುಕಡಿಗಳಿಂದ ಗೌರವ ವಂದನೆ ಸ್ವೀಕರಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು.

ಸಾಮಾಜಿಕ ನ್ಯಾಯ ಸಾರಿದ ಈ



ಪುಣ್ಯ ಭೂಮಿಯಲ್ಲಿ ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಧ್ವಜಾರೋಹಣ ಮಾಡುವ ಅವಕಾಶ ಸಿಕ್ಕಿರುವುದು ನನ್ನ ಸೌಭಾಗ್ಯವಾಗಿದೆ. 2013–14ರಿಂದ 2025–26ನೇ ಸಾಲಿನವರೆಗೆ ಮಂಡಳಿಗೆ 24,780 ಕೋಟಿ ರೂ. ಅನುದಾನ ನೀಡಲಾಗಿದೆ. ಇದರಲ್ಲಿ 14,000 ಕೋಟಿ ರೂ. ಅನುದಾನ ಖರ್ಚು ಮಾಡಲಾಗಿದೆ. 41,103 ಕಾಮಗಾರಿಗಳನ್ನು ಕೈಗೆತ್ತಿಕೊಂಡು ಇದುವರೆಗೆ 32,985 ಕಾಮಗಾರಿಗಳು ಪೂರ್ಣಗೊಂಡಿವೆ. 8,118 ಕಾಮಗಾರಿಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿದ್ದು, ತುಂಗಾಭದ್ರಾ, ಕೃಷ್ಣದಂತೆ ಅಭಿವೃದ್ಧಿ ಕಾರ್ಯಗಳು ಪ್ರದೇಶದಲ್ಲಿ ತುಂಬಿ ತುಳುಕುತ್ತಿವೆ ಎಂದರು.

371ಜೆ ಜಾರಿಯಾದ ನಂತರ 79,383 ಹುದ್ದೆಗಳನ್ನು ಈಗಾಗಲೇ ಭರ್ತಿ ಮಾಡಲಾಗಿದೆ. ಹೊಸದಾಗಿ ಭರ್ತಿ ಮಾಡುತ್ತಿರುವ 72 ಸಾವಿರ ಹುದ್ದೆಗಳಲ್ಲಿ 32 ಸಾವಿರ ಹುದ್ದೆಗಳು ಈ ಭಾಗದ ಯುವಜನರಿಗೆ ದೊರೆಯಲಿವೆ. ಮೀಸಲಾತಿಯ ಕಾರಣದಿಂದ ವೈದ್ಯಕೀಯ ಕ್ಷೇತ್ರದಲ್ಲಿ 10,000ಕ್ಕೂ ಹೆಚ್ಚು ಹಾಗೂ

5ನೇ ಪುಟಕ್ಕೆ...

## ಇಂದು ಸಚಿವ ಸಂಪುಟ ಸಭೆ



ಮಂಗಳೂರು: ರಾಜ್ಯ ಸರಕಾರದ ಸಚಿವ ಸಂಪುಟ ಸಭೆ ಇಂದು ಸೆಪ್ಟೆಂಬರ್ 18ರಂದು ಮಂಗಳೂರು ನಗರದ ಪಡೀಲ್‌ನಲ್ಲಿರುವ ಜಿಲ್ಲಾಧಿಕಾರಿ ಕಚೇರಿ (ಪ್ರಜಾಸೌಧ) ಯಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ ಮಂಗಳೂರು ನಗರದಲ್ಲಿ ಸಂಚಾರ ವ್ಯವಸ್ಥೆಯಲ್ಲಿ ತಾತ್ಕಾಲಿಕವಾಗಿ ಬದಲಾವಣೆ ಮಾಡಲಾಗಿದೆ. ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸೇರಿದಂತೆ ಸಂಪುಟ ದರ್ಜೆಯ ಸಚಿವರು ಇಂದು ಮಂಗಳೂರಿಗೆ ಆಗಮಿಸಿ ಸಭೆಯಲ್ಲಿ ಭಾಗವಹಿಸಲಿರುವ ಹಿನ್ನೆಲೆಯಲ್ಲಿ ಮಂಗಳೂರು ನಗರ ಪೊಲೀಸ್ ಇಲಾಖೆ ಸಾರ್ವಜನಿಕರಿಗೆ ಸಂಚಾರ ಸಲಹೆಗಳನ್ನು ಪ್ರಕಟಿಸಿದೆ. ಇಂದು ಸಂಜೆ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಸಚಿವರು ಮಂಗಳೂರು ನಗರಕ್ಕೆ ಆಗಮಿಸಲಿದ್ದು, ನಾಳೆ ಬೆಳಗ್ಗೆ ನಗರದ ಪ್ರಮುಖ ರಸ್ತೆಗಳ

–2ನೇ ಪುಟಕ್ಕೆ...

## ಭಾರತ ಜಾಗತಿಕ ಚಿಪ್ ಕೇಂದ್ರ: ಮೋದಿ



ನವದೆಹಲಿ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಗುರುವಾರ ನವದೆಹಲಿಯ ಯಶೋಭೂಮಿ ಕನ್ವೆನ್ಷನ್ ಸೆಂಟರ್‌ನಲ್ಲಿ SEMICON India-2026 ಸಮಾವೇಶಕ್ಕೆ ಚಾಲನೆ ನೀಡಿದರು. ಸೆಪ್ಟೆಂಬರ್ 17ರಿಂದ 19ರವರೆಗೆ ನಡೆಯಲಿರುವ ಸಮಾವೇಶದ ಈ ವರ್ಷದ ಧ್ಯೇಯವಾಕ್ಯ ಸಿಲಿಕಾನ್‌ನಿಂದ ವ್ಯವಸ್ಥೆಗಳವರೆಗೆ:ಪರಿಸರ ವ್ಯವಸ್ಥೆಯ ನಿರ್ಮಾಣ) ಆಗಿದೆ. 2

## ರೇಷನ್ ಕಾರ್ಡ್ ಇ-ಕೆವೈಸಿ ಗಡುವು ಅ.20ರ ವರೆಗೆ ವಿಸ್ತರಣೆ



ಬೆಂಗಳೂರು: ಜನರಿಗೆ ಅನುಕೂಲ ಆಗುವ ಎರಡು ಮಹತ್ವದ ನಿರ್ಧಾರವನ್ನ ಸರ್ಕಾರ ಮತ್ತು ಆಹಾರ ಇಲಾಖೆ ತೆಗೆದುಕೊಂಡಿದೆ. ಖುದ್ದು ಆಹಾರ ಇಲಾಖೆ ಸಚಿವ ರಿಜ್ವಾನ್ ಅರ್ಷದ್ ಈ ಬಗ್ಗೆ ಮಾಹಿತಿ ನೀಡಿದ್ದಾರೆ.

ರೇಷನ್ ಕಾರ್ಡ್ ಇ–ಕೆವೈಸಿ ಮಾಡಿಸುವ ಗಡುವನ್ನು ಸರ್ಕಾರ ವಿಸ್ತರಣೆ ಮಾಡಿದೆ. ಅಕ್ಟೋಬರ್ 20ರ ವರೆಗೂ ಅವಧಿ ವಿಸ್ತರಣೆ ಮಾಡಿ ಆಹಾರ ಇಲಾಖೆ ಆದೇಶ ಮಾಡಿದೆ. ಸರ್ವರ್ ಸಮಸ್ಯೆಯಿಂದಾಗಿ ಇ–ಕೆವೈಸಿ ಮಾಡಿಸಲು ಸಮಸ್ಯೆ ಆಗ್ತಿತ್ತು. ಈ ಹಿನ್ನೆಲೆ ಗಡುವು ವಿಸ್ತರಣೆ ಮಾಡಿರೋದಾಗಿ ಸಚಿವ ರಿಜ್ವಾನ್ ಅರ್ಷದ್ ಮಾಹಿತಿ ನೀಡಿದ್ದಾರೆ. ನ್ಯಾಯ ಬೆಲೆ ಅಂಗಡಿಗಳ ಸಮಯವನ್ನ ಸರ್ಕಾರ ಪರಿಷ್ಕರಣೆ ಮಾಡಿದೆ. ಕೂಲಿ ಕಾರ್ಮಿಕರು, ಆಟೋ ಚಾಲಕರು, ಕಟ್ಟಡ ಕಾರ್ಮಿಕರು ರೇಷನ್ ಪಡೆಯಲು ಸಹಕಾರಿ ಆಗುವಂತೆ ನ್ಯಾಯಬೆಲೆ ಅಂಗಡಿ ಸಮಯವನ್ನ ಪರಿಷ್ಕರಣೆ ಮಾಡಲಾಗಿದೆ.

## ವಿಜಯಪುರ, ಬಳ್ಳಾರಿಯಲ್ಲಿ ಭೂಕಂಪ: ಜನರಲ್ಲಿ ಮೂಡಿದ ಆತಂಕ

ವಿಜಯಪುರ/ಬಳ್ಳಾರಿ: ಬಳ್ಳಾರಿ ಮತ್ತು ವಿಜಯಪುರ ಜಿಲ್ಲೆಯ ಕೆಲವಡೆ ಬುಧವಾರ ಮತ್ತು ಗುರುವಾರ ನಸುಕಿನಲ್ಲಿ ಲಘು ಭೂಕಂಪವಾಗಿದೆ. 'ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನ ಇಂಗಳೇಶ್ವರ ಗ್ರಾಮ ಕೇಂದ್ರಿತವಾಗಿ ಗುರುವಾರ ಬೆಳಿಗ್ಗೆ 5.34ಕ್ಕೆ ಲಘು ಭೂಕಂಪವಾಗಿದೆ. ರಿಕ್ಟರ್ ಮಾಪಕದಲ್ಲಿ 3.6 ತೀವ್ರತೆ ದಾಖಲಾಗಿದೆ' ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ತಿಳಿಸಿದೆ. ಕಂಪನಕ್ಕೆ ಮನೆಯಲ್ಲಿ ಪಾತ್ರೆಗಳು, ಇತರೆ ವಸ್ತುಗಳು ಅಲ್ಲಾಡಿವೆ. ಭಯಾನಕ ಶಬ್ದದಿಂದ ಭಯಭೀತರಾಗಿ ಜನರು ಮನೆಯಿಂದ ಹೊರ ಓಡಿಬಂದರು.

ಬಳ್ಳಾರಿ ಜಿಲ್ಲೆಯ ಹಲವೆಡೆ ಬುಧವಾರ ಮಧ್ಯಾಹ್ನ ಲಘು ಭೂಕಂಪವಾಗಿದೆ. ರಿಕ್ಟರ್ ಮಾಪಕದಲ್ಲಿ 2.5 ತೀವ್ರತೆ ದಾಖಲಾಗಿದೆ ಎಂದು ರಾಷ್ಟ್ರೀಯ ಭೂಕಂಪನಶಾಸ್ತ್ರ ಕೇಂದ್ರ ತಿಳಿಸಿದೆ.

## ನೀರಿನ ಸಮಸ್ಯೆ: ಕಿಶೌ ಯೋಜನೆಗೆ 6ರಾಜ್ಯಗಳ ಒಪ್ಪಂದ

ಚಂಡೀಗಢ: ಉತ್ತರ ಭಾರತದ ಬಹುದಿನಗಳ ನೀರಿನ ದಾಹ ತಣಿಸಲು ಕೊನೆಗೂ ಕಾಲ ಕೂಡಿಬಂದಿದೆ. ಅದರಂತೆ, ದೇಶದ ಅತಿ ದೊಡ್ಡ ನದಿ ನೀರಿನ ಹಂಚಿಕೆ ವಿವಾದ ಕೇಂದ್ರ ಸರ್ಕಾರ ಬಗೆಹರಿಸಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮ್ಮುಖದಲ್ಲಿ ಹಿಮಾಚಲ ಪ್ರದೇಶ, ಉತ್ತರಾಖಂಡ, ದೆಹಲಿ, ಹರಿಯಾಣ, ರಾಜಸ್ಥಾನ ಮತ್ತು ಉತ್ತರ ಪ್ರದೇಶ ರಾಜ್ಯಗಳು ಮಹತ್ವದ ಕಿಶೌ ಬಹುಮುಖಿ ಯೋಜನೆ ಒಪ್ಪಂದಕ್ಕೆ ಸಹಿ ಹಾಕಿವೆ. ಈ ಬೃಹತ್ ಯೋಜನೆಯಿಂದ ಸುಮಾರು ಒಂದು ಲಕ್ಷ ಹೆಕ್ಟೇರ್ ಕೃಷಿ ಭೂಮಿಗೆ ನೀರು, 660 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾತ್ರವಲ್ಲದೆ, ಕಲುಷಿತಗೊಂಡಿರುವ ಯಮುನಾ ನದಿಯ ಪುನರುಜ್ಜೀವನವೂ 2




## ವಿಜಯನಗರ ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ಬದ್ಧ; ಎಲ್ಲರೂ ಕೈ ಜೋಡಿಸಲಿ: ಸಚಿವ ಬಸವಂತಪ್ಪ



ವಿಜಯನಗರ : ಹೈದರಾಬಾದ್ ನಿಜಾಮರ ಕಪಿಮುಷ್ಟಿ ಮತ್ತು ದಬ್ಬಾಳಿಕೆಯ ಆಡಳಿತದಿಂದ ಸ್ವತಂತ್ರಗೊಂಡು 79 ವರ್ಷಗಳನ್ನು ಪೂರೈಸುತ್ತಿರುವ ಸಂಭ್ರಮದ ನೆನಪಿನಲ್ಲಿ, ಕಲ್ಯಾಣ ಕರ್ನಾಟಕ ಉತ್ಸವ ಆಚರಿಸಲಾಗುತ್ತಿದೆ. ಈ ಕಲ್ಯಾಣ ಕರ್ನಾಟಕದ ಸರ್ವೋತೋಮುಖ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಜೊತೆಗೆ ವಿಜಯನಗರ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ, ಸಾರ್ವಜನಿಕರ ಸಹಕಾರ ಇರಲಿ ಎಂದು ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ಎಸ್. ಬಸವಂತಪ್ಪ ಅವರು ಹೇಳಿದರು.

ಅವರು ಇಂದು (ಸೆ.17) ಬೆಳಿಗ್ಗೆ ಹೊಸಪೇಟೆ ಜಿಲ್ಲಾ ಕ್ರೀಡಾಂಗಣದಲ್ಲಿ ವಿಜಯನಗರ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾಗಿದ್ದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಮಾತನಾಡಿದರು.

1947ರ ಆಗಸ್ಟ್ 15ರಂದು ಇಡೀ ದೇಶ ಬ್ರಿಟಿಷರ ಆಡಳಿತದಿಂದ ಸ್ವಾತಂತ್ರ್ಯಗೊಂಡರೂ,

2ನೇ ಪುಟಕ್ಕೆ...

## ಜನರ ಏಳಿಗೆಯೇ ಸರ್ಕಾರದ ಸಂಕಲ್ಪ: ರಘುಮೂರ್ತಿ



ಬಳ್ಳಾರಿ : ಹೈದರಾಬಾದ್ ನಿಜಾಮರ ಆಳ್ವಿಕೆಯಿಂದ ಮುಕ್ತಿ ಪಡೆದ ಕಲ್ಯಾಣ ಕರ್ನಾಟಕ ಭಾಗದ ಸರ್ವಾಂಗೀಣ ಪ್ರಗತಿ, ಸಾಮಾಜಿಕ ನ್ಯಾಯ ಹಾಗೂ ಜನರ ಏಳಿಗೆಯೇ ನಮ್ಮ ಸರ್ಕಾರದ ಅಚಲ ಸಂಕಲ್ಪವಾಗಿದೆ ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಟಿ. ರಘುಮೂರ್ತಿ ಅವರು ಹೇಳಿದರು.ಜಿಲ್ಲಾಡಳಿತದ ವತಿಯಿಂದ ನಗರದ ಸರ್ಕಾರಿ ಪದವಿಪೂರ್ವ (ಮಾ.ಪು) ಕಾಲೇಜು ಮೈದಾನದಲ್ಲಿ ಗುರುವಾರ ಆಯೋಜಿಸಲಾಗಿದ್ದ 79ನೇ ಕಲ್ಯಾಣ ಕರ್ನಾಟಕ ಉತ್ಸವ ಸಮಾರಂಭದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ

## 23 ತಾಲೂಕುಗಳು ಬರಪೀಡಿತ ಪಟ್ಟಿಗೆ

- ಬರ ಘೋಷಣೆ 6 ತಿಂಗಳು ಜಾರಿ
- ವಾರಕ್ಕೊಮ್ಮೆ ಬರ ಪರಿಶೀಲನೆ
- ಬೆಳೆ ನಷ್ಟದ ಸಮೀಕ್ಷೆಗೆ ಸೂಚನೆ
- ಪರಿಹಾರ ಕ್ರಮಕ್ಕೆ ಡಿಸಿಗಳಿಗೆ ಅಧಿಕಾರ

ಬೆಂಗಳೂರು: ರಾಜ್ಯದ ಹಲವು ಭಾಗಗಳಲ್ಲಿನ ಒಣ ಹವಾಮಾನದ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರ ಗುರುವಾರ ಮತ್ತೆ 23 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಇದರೊಂದಿಗೆ, ಇಲ್ಲಿಯವರೆಗೆ ಬರಪೀಡಿತ ಎಂದು ಘೋಷಿಸಲಾದ ಒಟ್ಟು ತಾಲೂಕುಗಳ ಸಂಖ್ಯೆ 124ಕ್ಕೆ ಏರಿ–ಕೆಯಾಗಿದೆ. ಕರ್ನಾಟಕ ರಾಜ್ಯ ನೈಸರ್ಗಿಕ



ವಿಕೋಪ ಮೇಲ್ವಿಚಾರಣಾ ಕೇಂದ್ರವು ನಡೆಸಿದ ಸಮಗ್ರ ಮೌಲ್ಯಮಾಪನ ಮತ್ತು ಸ್ಥಳ ಪರಿಶೀಲನೆ ಆಧಾರದ ಮೇಲೆ, 2

## ನಾನೀಗ ಸಿಎಂ ಸ್ಥಾನದಲ್ಲಿಲ್ಲ: ಸಿದ್ದು ಬೇಸರ



ಬೆಂಗಳೂರು: ನಾನೀಗ ಮುಖ್ಯಮಂತ್ರಿ ಅಲ್ಲ, ನನ್ನ ಮಾತು ಎಷ್ಟು ನಡೆಯುತ್ತೆ? ಎಷ್ಟು ನಡೆಯಲ್ಲ ಅನ್ನೋದು ನನಗೆ ಮಾತ್ರ ಗೊತ್ತು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಮಾರ್ಮಿಕ ಮಾತುಗಳನ್ನಾಡಿದ್ದಾರೆ.

ವಿಧಾನಸೌಧದ ಸಿಎಲ್‌ಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು. ನಾನೀಗ ಮುಖ್ಯಮಂತ್ರಿ ಅಲ್ಲ. ನನ್ನ ಮಾತು ಈಗಲೂ ನಡೆಯುತ್ತೆ ಅಂತ ಬಹಳ ಜನ ಅನ್ಕೊಂಡಿದ್ದಾರೆ. ನಾನೂ ಹಾಗೇ ಅನ್ಕೊಂಡಿದ್ದೇನೆ. ಆದ್ರೆ ನನ್ನ ಮಾತು ಎಷ್ಟು ನಡೆಯುತ್ತೆ, ಎಷ್ಟು ನಡೆಯಲ್ಲ ಅಂತ ನನಗೆ ಮಾತ್ರ ಗೊತ್ತು ಎಂದು ಹೇಳಿದ್ದಾರೆ.

ನಿನ್ನೆಯಷ್ಟೇ ಬೆಂಗಳೂರಿನಲ್ಲಿ ಎಐಸಿಸಿ ನಾಯಕರ ಜೊತೆ ಸಿದ್ದರಾಮಯ್ಯ. ಪ್ರತ್ಯೇಕ ಮಾತುಕತೆ ನಡೆಸಿದ್ದರು. ಈ ಬೆನ್ನಲ್ಲೇ ಮಾರ್ಮಿಕ ಮಾತುಗಳನ್ನಾಡಿರುವುದು ಚರ್ಚೆಗೆ ಗ್ರಾಸವಾಗಿದೆ. ಸದ್ಯದ ಸರ್ಕಾರದಲ್ಲಿ ತಮ್ಮ ಮಾತು ಎಷ್ಟು ನಡೆಯುತ್ತೆ? ಎಷ್ಟು ನಡೆಯಲ್ಲ? ಅಂತ ತಮಗೆ ಮಾತ್ರ ಗೊತ್ತಿದೆ ಎಂದು ಹೇಳುವ ಮೂಲಕ ತಮ್ಮ ಸಲಹೆಗಳಿಗೆ ಮನ್ನಣೆ ಸಿಕ್ತಿಲ್ಲ ಅಂತ ಪರೋಕ್ಷವಾಗಿ ಬೇಸರ ಹೊರಹಾಕಿದ್ದಾರೆ.

ಇದಕ್ಕೂ ಮುನ್ನ ಬಿಜೆಪಿ, ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಪ್ರಜಾಪ್ರಭುತ್ವದ ವಿರೋಧಿಗಳಿಂದ ಸಂವಿಧಾನ ಶ್ರೇಷ್ಠವಾಗಲ್ಲ. ಸ್ವಾತಂತ್ರ್ಯ ಬಂದು 80 ವರ್ಷ ಆದರೂ ಸಂವಿಧಾನದ ಆಶಯ ಈಡೇರಿಲ್ಲ. ಪ್ರಜಾಪ್ರಭುತ್ವ ಧ್ವಂಸ ಮಾಡೋರ ಜೊತೆಗೆ ಹೋಗಬಾರದು, ಮನುವಾದಿಗಳಿಂದ ಬದಲಾವಣೆ ಆಗೋದಿಲ್ಲ. ಮನುವಾದಿಗಳ ಜೊತೆ ನೀವು ಹೋದ್ರೆ ನಿಮಗೆ ಒಂದು ಸ್ಥಾನಮಾನ ಸಿಗಬಹುದು, ಆದ್ರೆ ಸಮಾಜದಲ್ಲಿ ಬದಲಾವಣೆ ಆಗಲ್ಲ.

## ಒಂದನೇ ಪುಟದಿಂದ...

# 23 ತಾಲೂಕುಗಳು ಬರಪೀಡಿತ ಪಟ್ಟಿಗೆ

101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿತ್ತು. ನಂತರ, ರಾಜ್ಯದ ಹಲವು ಭಾಗಗಳಲ್ಲಿ ಮಳೆಯಿಲ್ಲದ ಪರಿಸ್ಥಿತಿ ಮುಂದುವರಿದ ಹಿನ್ನೆಲೆಯಲ್ಲಿ, ಏಖಓಆಒಅ ಉಳಿದ 139 ತಾಲೂಕುಗಳ ವೈಜ್ಞಾನಿಕ ಮೌಲ್ಯಮಾಪನವನ್ನು ನಡೆಸಿತು.

ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ್ ಅವರ ನೇತೃತ್ವದ ನೈಸರ್ಗಿಕ ವಿಕೋಪಗಳ ಕುರಿತ ಸಚಿವ ಸಂಪುಟ ಉಪ-ಸಮಿತಿಯ ನಿರ್ದೇಶನದ ಮೇರೆಗೆ, 24 ತಾಲೂಕುಗಳ ವ್ಯಾಪ್ತಿಯ 214 ಹಳ್ಳಿಗಳಲ್ಲಿ ಮೊಬೈಲ್ ಅಪ್ಲಿಕೇಶನ್ ಮೂಲಕ ಸ್ಥಳ ಪರಿಶೀಲನೆ ನಡೆಸಲಾಯಿತು.

ಸ್ಥಳ ಪರಿಶೀಲನಾ ಪ್ರಕ್ರಿಯೆ ಮತ್ತು ಏಖಓಆಒಅ ಸಲ್ಲಿಸಿದ ಸಮಗ್ರ ವರದಿಯ ಆಧಾರದ ಮೇಲೆ ಈಗ ಹೆಚ್ಚುವರಿಯಾಗಿ 23 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಇವುಗಳಲ್ಲಿ 21 ತಾಲೂಕುಗಳನ್ನು ತೀವ್ರ ಬರಪೀಡಿತ ಮತ್ತು ಎರಡು ತಾಲೂಕುಗಳನ್ನು ಮಧ್ಯಮ ಬರಪೀಡಿತ ಎಂದು ವರ್ಗೀಕರಿಸಲಾಗಿದೆ. ಈ ಘೋಷಣೆಯು ತಕ್ಷಣದಿಂದಲೇ ಜಾರಿಗೆ ಬಂದಿದ್ದು, 6 ತಿಂಗಳವರೆಗೆ ಜಾರಿಯಲ್ಲಿರುತ್ತದೆ.

ತೀವ್ರ ಬರಪೀಡಿತವೆಂದು ಘೋಷಿಸಲಾದ 21 ತಾಲೂಕುಗಳೆಂದರೆ: ತುಮಕೂರು ಜಿಲ್ಲೆಯ ತಿಪಟೂರು; ಕೊಪ್ಪಳದ ಕಾರಟಗಿ; ರಾಯಚೂರಿನ ಮಾನವಿ, ಸಿಂಧನೂರು ಮತ್ತು ಸಿರ್ವಾರ; ಕಲಬುರಗಿಯ ಅಫಜಲಪುರ, ಆಳಂದ, ಚಿತ್ತಾಪುರ, ಕಲಬುರಗಿ, ಯಡ್ರಾಮಿ ಮತ್ತು ಶಹಾಬಾದ್; ಬೀದರ್‌ನ ಭಾಲ್ಕಿ; ವಿಜಯಪುರದ ಬಸವನ ಬಾಗೇವಾಡಿ, ಬಬಲೇಶ್ವರ ಮತ್ತು ತಿಕೋಟಾ; ಹಾವೇರಿಯ ರಟ್ಟಿಹಳ್ಳಿ; ಧಾರವಾಡದ ಹುಬ್ಬಳ್ಳಿ, ನವಲಗುಂದ, ಹುಬ್ಬಳ್ಳಿ ನಗರ ಮತ್ತು ಅಣ್ಣಿಗೇರಿ; ಹಾಗೂ ಚಿಕ್ಕಮಗಳೂರಿನ ಕಡೂರು.

ಮಧ್ಯಮ ಬರಪೀಡಿತವೆಂದು ಕೊಡಗು ಜಿಲ್ಲೆಯ ಪೊನ್ನಂಪೇಟೆ ಮತ್ತು ವಿರಾಜಪೇಟೆ ತಾಲೂಕುಗಳನ್ನು ಘೋಷಿಸಲಾಗಿದೆ.
ರಾಜ್ಯ ವಿಪತ್ತು ಪರಿಹಾರ ನಿಧಿಯ ಮಾರ್ಗಸೂಚಿಗಳನ್ವಯ ಅಗತ್ಯ ಪರಿಹಾರ ಮತ್ತು ತುರ್ತು ಸ್ಪಂದನಾ ಕ್ರಮಗಳನ್ನು ಕೈಗೊಳ್ಳಲು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳ ಮುಖ್ಯಸ್ಥರಾಗಿರುವ ಆಯಾ ಜಿಲ್ಲಾಧಿಕಾರಿಗಳಿಗೆ ಸರ್ಕಾರ ಅಧಿಕಾರ ನೀಡಿದೆ.

ಬೆಳೆ ನಷ್ಟದ ಸಮೀಕ್ಷೆಯನ್ನು ಜಂಟಿಯಾಗಿ ನಡೆಸುವಂತೆ ಹಾಗೂ ಪರಿಹಾರದ ಅಂದಾಜು ವರದಿಗಳನ್ನು ಆದಷ್ಟು ಶೀಘ್ರವಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ಕೃಷಿ ಆಯುಕ್ತರು, ತೋಟಗಾರಿ-ಕೆ ನಿರ್ದೇಶಕರು ಮತ್ತು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.
ಸೆಪ್ಟೆಂಬರ್ ತಿಂಗಳಲ್ಲೂ ವಾಡಿಕೆಗಿಂತ ಕಡಿಮೆ ಮಳೆಯಾಗುವ ಮುನ್ಸೂಚನೆ ಇರುವುದರಿಂದ, ಕೆಎಸ್‌ಎನ್‌ಡಿಎಂಸಿ ಪ್ರತಿ ವಾರ ಬರ ಪರಿಸ್ಥಿತಿಯನ್ನು ಪರಿಶೀಲಿಸಲಿದೆ ಎಂದು ಸರ್ಕಾರ ತಿಳಿಸಿದೆ.

ಅರ್ಹತೆಯ ಆಧಾರದ ಮೇಲೆ ಹೆಚ್ಚುವರಿ ತಾಲೂಕುಗಳನ್ನು ಹಂತ ಹಂತವಾಗಿ ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗುವುದು ಎಂದೂ ಸರ್ಕಾರ ಹೇಳಿದೆ.

# ಇಂದು ಸಚಿವ ಸಂಪುಟ ಸಭೆ

ಮೂಲಕ ಪಡೀಲ್‌ನ ಪ್ರಜಾಸೌಧಕ್ಕೆ ತೆರಳಲಿದ್ದಾರೆ. ಸಭೆ ಬಳಿಕ ಮಧ್ಯಾಹ್ನ ಮೇರಿಹಿಲ್‌ನಲ್ಲಿರುವ ಹೆಲಿಪ್ಯಾಡ್ ಮೂಲಕ ಉಡುಪಿಗೆ ತೆರಳಿ, ಬಳಿಕ ಮಂಗಳೂರು ನಗರಕ್ಕೆ ವಾಪಸಾಗಿ ವಾಸ್ತವ್ಯ ಹೂಡಲಿದ್ದಾರೆ. ಸೆ.19ರ ಬೆಳಗ್ಗೆ ಅವರು ನಗರದಿಂದ ನಿರ್ಗಮಿಸಲಿದ್ದಾರೆ.
ಈ ಹಿನ್ನೆಲೆಯಲ್ಲಿ ಗಣ್ಯರ ಭದ್ರತೆ ಹಾಗೂ ಸುಗಮ ವಾಹನ ಸಂಚಾರದ ದೃಷ್ಟಿಯಿಂದ ಸಾರ್ವಜನಿಕರು ಪೊಲೀಸ್ ಇಲಾಖೆಯ ಸೂಚನೆಗಳನ್ನು ಪಾಲಿಸಿ ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಮನವಿ ಮಾಡಲಾಗಿದೆ. ಹ್ಯಾಮಿಲ್ಟನ್ ಜಂಕ್ಷನ್‌ನಿಂದ ತಾಜ್ ವಿವಾಂತ್ ಮುಂಭಾಗದ ಮೂಲಕ ಬದ್ರಿಯಾ ಜಂಕ್ಷನ್ ಕಡೆಗೆ ತೆರಳುವ ವಾಹನಗಳು ಹ್ಯಾಮಿಲ್ಟನ್ ಜಂಕ್ಷನ್ ನೆಲ್ಲಿಕಾಯಿ ರಸ್ತೆ ಮೂಲಕ ಪರ್ಯಾಯವಾಗಿ ಸಂಚರಿಸಬೇಕು. ಪಂಪುವೆಲ್ ಜಂಕ್ಷನ್‌ನಿಂದ ನಾಗುರಿ ಮೂಲಕ ಪಡೀಲ್ ಕಡೆಗೆ ಅಥವಾ ಪಡೀಲ್‌ನಿಂದ ನಾಗುರಿ ಮೂಲಕ ಪಂಪುವೆಲ್ ಕಡೆಗೆ ತೆರಳುವ ವಾಹನಗಳು ನಂತೂರು ವೃತ್ತ ಕೈಕಂಬ 'ಒರೋಳಿ ಮಾರ್ಗವನ್ನು ಬಳಸಬಹುದು. ಪರ್ಯಾಯವಾಗಿ ತೊಕ್ಕೊಟ್ಟು ದೇರಳಕಟ್ಟೆ ಮುಡಿಪು ಬೊಳಿಯಾರ್ ಮೆಲ್ಕಾರ್ ಮಾರ್ಗದಲ್ಲೂ ಸಂಚರಿಸಬಹುದಾಗಿದೆ.

# ಭಾರತ ಜಾಗತಿಕ ಚಿಪ್ ಕೇಂದ್ರ: ಮೋದಿ

ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತವನ್ನು ಜಾಗತಿಕವಾಗಿ ಪ್ರಮುಖ ಉತ್ಪಾದನಾ ತಾಣವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಮೋದಿ ಪ್ರಸ್ತಾಪಿಸಿದರು. ಭಾರತವು ಚಿಪ್‌ಗಳ ಬಳಕೆಯ ಪ್ರಮುಖ ಮಾರುಕಟ್ಟೆಯಿಂದ ಚಿಪ್ ವಿನ್ಯಾಸ, ಉತ್ಪಾದನೆ, ಪ್ಯಾಕೇಜಿಂಗ್, ಎಲೆಕ್ಟ್ರಾನಿಕ್ಸ್ ಮತ್ತು ಸಂಪೂರ್ಣ ಸೆಮಿಕಂಡಕ್ಟರ್ ಮೌಲ್ಯ ಸರಪಳಿಯ ಪ್ರಮುಖ ಭಾಗವಾಗುವತ್ತ ಸಾಗುತ್ತಿದೆ ಎಂದು ಹೇಳಿದರು.

ಸಮಾವೇಶದಲ್ಲಿ ಪ್ರಧಾನಿ ವಿವಿಧ ಪ್ರದರ್ಶನ ಮಳಿಗೆಗಳಿಗೆ ಭೇಟಿ ನೀಡಿ ಉದ್ಯಮ ಪ್ರತಿನಿಧಿಗಳು, ಸಂಶೋಧಕರು, ಸ್ಟಾರ್ಟ್‌ಅಪ್‌ಗಳು ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ವಿದ್ಯಾರ್ಥಿಗಳು ಮತ್ತು ಯುವ ಪ್ರತಿಭೆಗಳಿಗೆ ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ಹಾಗೂ ಹೊಸ ಆವಿಷ್ಕಾರಗಳಿಗೆ ಅವಕಾಶ ಕಲ್ಪಿಸುವುದಕ್ಕೂ ಒತ್ತು ನೀಡಲಾಗಿದೆ.600ಕ್ಕೂ ಹೆಚ್ಚು ಕಂಪನಿಗಳು, 52 ದೇಶಗಳ ಪ್ರತಿನಿಧಿಗಳು, 150ಕ್ಕೂ ಹೆಚ್ಚು ಭಾಷಣಕಾರರು ಭಾಗವಹಿಸುತ್ತಿದ್ದಾರೆ. ಜಪಾನ್, ದಕ್ಷಿಣ ಕೊರಿಯಾ, ಮಲೇಷ್ಯಾ, ನೆದರ್‌ಲ್ಯಾಂಡ್ಸ್, ಸಿಂಗಾಪುರ ಮತ್ತು ಸ್ವೀಡನ್ ಸೇರಿದಂತೆ ಆರು ದೇಶಗಳ ಪೆವಿಲಿಯನ್‌ಗಳು, 12 ರಾಜ್ಯಗಳ ಮಳಿಗೆಗಳು, ಸ್ಟಾರ್ಟ್‌ಅಪ್ ಪೆವಿಲಿಯನ್, ವಿದ್ಯಾರ್ಥಿಗಳ ಹ್ಯಾಕಥಾನ್ ಹಾಗೂ ಕೌಶಲ್ಯಾಭಿವೃದ್ಧಿ ವಿಭಾಗಗಳಿವೆ.

ಸಮಾವೇಶದ ವೇಳೆ ಪಂಜಾಬ್‌ನ ಮೊಹಾಲಿಯ CDIL Semiconductor ATMP ಘಟಕ ಮತ್ತು ಗುಜರಾತ್‌ನ ಪಾಲ್ಸಾನಾದ ಖಣಝು ಖಜಟುಥಿಂಟಿ ಔಖಂಖ ಘಟಕದಲ್ಲಿ ವಾಣಿಜ್ಯ ಉತ್ಪಾದನೆ ಆರಂಭಿಸುವುದಕ್ಕೂ ಪ್ರಧಾನಿ ಚಾಲನೆ ನೀಡಿ-ದರು. ಇದನ್ನು ಭಾರತದ ಸೆಮಿಕಂಡಕ್ಟರ್ ಉತ್ಪಾದನಾ ಸಾಮರ್ಥ್ಯ ವಿಸ್ತರಣೆಯ ಪ್ರಮುಖ ಹೆಜ್ಜೆಯಾಗಿ ಪರಿಗಣಿಸಲಾಗಿದೆ.
ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತವು ನೀತಿ ರೂಪಿಸುವ ಹಂತದಿಂದ ವಾಸ್ತವಿಕ ಕಾರ್ಖಾನೆ ಉತ್ಪಾದನೆಯ ಹಂತಕ್ಕೆ ಪ್ರವೇಶಿಸಿದೆ ಎಂದು ಮೋದಿ ಒತ್ತಿ ಹೇಳಿದರು. ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಖಾಸಗಿ ವಲಯದ ಹೆಚ್ಚಿನ ಹೂಡಿಕೆಯ ಅಗತ್ಯವನ್ನೂ ಅವರು ಪ್ರತಿಪಾದಿಸಿದರು.

ಸೆಪ್ಟೆಂಬರ್ 17ರಿಂದ 19ರವರೆಗೆ ನಡೆಯುವ ಈ ಸಮಾವೇಶದಲ್ಲಿ ಜಾಗತಿಕ ಚಿಪ್ ಉದ್ಯಮ, ಹೂಡಿಕೆದಾರರು, ಸಂಶೋಧಕರು, ನೀತಿ ನಿರೂಪಕರು, ಸ್ಟಾರ್ಟ್‌ಅಪ್‌ಗಳು, ಶಿಕ್ಷಣ ಸಂಸ್ಥೆಗಳು ಮತ್ತು ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಸೇರಿ ಭಾರತದ ಸೆಮಿಕಂಡಕ್ಟರ್ ಹಾಗೂ ಎಲೆಕ್ಟ್ರಾನಿಕ್ಸ್ ಪರಿಸರ ವ್ಯವಸ್ಥೆಯ ವಿಸ್ತರಣೆ ಕುರಿತು ಚರ್ಚಿಸಲಿದ್ದಾರೆ.

# ಕಿಶೌ ಯೋಜನೆಗೆ 6 ರಾಜ್ಯಗಳ ಒಪ್ಪಂದ

ಸಾಧ್ಯವಾಗಲಿದೆ. ಉತ್ತರ ಭಾರತದ ದೆಹಲಿ ಸೇರಿದಂತೆ ಆರು ರಾಜ್ಯಗಳ ನೀರಿನ ಮತ್ತು ವಿದ್ಯುತ್ ದಾಹವನ್ನು ನೀಗಿಸಲು ರೂಪಿಸಲಾಗಿರುವ ಕಿಶೌ ಬಹುಪಯೋಗಿ ಯೋಜನೆಯನ್ನು ಉತ್ತರಾಖಂಡದ ಡೆಹ್ರಾಡೂನ್ ಮತ್ತು ಹಿಮಾಚಲ ಪ್ರದೇಶದ ಸಿರ್ಮೌರ್ ಜಿಲ್ಲೆಗಳ ಗಡಿಯಲ್ಲಿ ಹರಿಯುವ ಟೋನ್ಸ್ ನದಿಗೆ ಅಡ್ಡಲಾಗಿ ಕೈಗೆತ್ತಿಕೊಳ್ಳಲಾಗುತ್ತಿದೆ.

ಈ ಮೂಲಕ ದೇಶದ ರಾಜಧಾನಿ ದೆಹಲಿಯ ಅತ್ಯಂತ ದೊಡ್ಡ ಸಮಸ್ಯೆಯಾದ ಕುಡಿಯುವ ನೀರಿನ ಕೊರತೆಗೆ ಮುಕ್ತಿ ಸಿಗಲಿದೆ. ಈ ಯೋಜನೆಯಿಂದ ದೆಹಲಿಗೆ ವಾರ್ಷಿಕವಾಗಿ 617 ಮಿಲಿಯನ್ ಕ್ಯೂಬಿಕ್ ಮೀಟರ್ ಕುಡಿಯುವ ನೀರು ಲಭ್ಯವಾಗಲಿದೆ. ಮುಂದುವರೆದು, ದಶಕಗಳಿಂದ ನನೆಗುದಿಗೆ ಬಿದ್ದಿದ್ದ ಈ ಯೋಜನೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರ ಸಮ್ಮುಖದಲ್ಲಿ ದೆಹಲಿ, ಉತ್ತರಾಖಂಡ, ಹಿಮಾಚಲ ಪ್ರದೇಶ, ಉತ್ತರ ಪ್ರದೇಶ, ಹರ್ಯಾಣ ಮತ್ತು ರಾಜಸ್ಥಾನ ರಾಜ್ಯಗಳ ಮುಖ್ಯಮಂತ್ರಿಗಳು ಸಹಿ ಹಾಕಿದ್ದಾರೆ. ಅದರಲ್ಲೂ, ಇದೊಂದು 15,624 ಕೋಟಿ ವೆಚ್ಚದ ರಾಷ್ಟ್ರೀಯ ಪ್ರಾಮುಖ್ಯತೆಯ ಯೋಜನೆ ಆಗಿರುವುದರಿಂದ, ಇದರ ನೀರಿನ ಘಟಕದ ವೆಚ್ಚದ ಶೇ. 90 ರಷ್ಟನ್ನು ಕೇಂದ್ರ ಸರ್ಕಾರವೇ ಭರಿಸುತ್ತಿದೆ.

# ಕಸದ ತೊಟ್ಟಿಗೆ ಸರ್ಕಾರಿ ದಾಖಲೆ:
## ನಾಗಮಂಗಲ ತಾಲ್ಲೂಕು ಕಚೇರಿ ಸಿಬ್ಬಂದಿ ಅಮಾನತು

ಮಂಡ್ಯ: ನಾಗಮಂಗಲ ತಾಲ್ಲೂಕು ಕಚೇರಿ ಆವರಣದ ಕಸದ ತೊಟ್ಟಿಯಲ್ಲಿ ಸರ್ಕಾರಿ ದಾಖಲೆಗಳನ್ನು ಎಸೆಯಲಾಗಿದೆ ಎಂಬುದು ದೃಶ್ಯ ಹಾಗೂ ಪತ್ರಿಕಾ ಮಾಧ್ಯಮಗಳಲ್ಲಿ ವರದಿ ಬಿತ್ತರವಾಗಿತ್ತು. ಈ ಕುರಿತು ಕೂಡಲೇ ಪ್ರಾಥಮಿಕ ವರದಿ ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ತಹಶೀಲ್ದಾರ್ ವರದಿ ಪ್ರಕಾರ ಅಭಿಲೇಖಾಲಯ ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಕೆಲವು ಅನುಪಯುಕ್ತ ದಾಖಲೆಗಳು ಹಾಗೂ ಹರಿದು ಹೋಗಿರುವ, ಗುರುತಿಸಲಾಗದ ದಾಖಲೆಯನ್ನು ಅನುಪಯುಕ್ತ ಎಂದು ಭಾವಿಸಿ ಎಸೆಯಲಾಗಿದೆ ಎಂದು ವರದಿ ಮಾಡಿದ್ದಾರೆ.

ಆದರೆ ದಾಖಲೆಗಳ ಸ್ವರೂಪವನ್ನು ಪರಿಶೀಲಿಸಲಾಗಿ ಅನುಪಯುಕ್ತ ದಾಖಲೆಯಾಗಿದ್ದರೂ ಕರ್ನಾಟಕ ರಾಜ್ಯ ಸಾರ್ವಜನಿಕ ದಾಖಲೆಗಳ ಅಧಿನಿಯಮ-2010 ಮತ್ತು ನಿಯಮ-2013ರ ಅನ್ವಯ ನಿಯಮಾನುಸಾರ ನಾಶಗೊಳಿಸುವ ಪ್ರಕ್ರಿಯೆ



ಜರುಗಿಸಬೇಕಾಗುತ್ತದೆ.

ಈ ಪ್ರಕ್ರಿಯೆಯನ್ನು ಜರುಗಿಸದೆ ಯಾವುದೇ ಸಾರ್ವಜನಿಕ ದಾಖಲೆಗಳನ್ನು ಸಾರ್ವಜನಿಕ ಸ್ಥಳದಲ್ಲಿ ಎಸೆಯಲು ಅವಕಾಶವಿರುವುದಿಲ್ಲ. ಆದ್ದರಿಂದ ಅಭಿಲೇಖಾಲಯ ಶಾಖೆಯ ಅಭಿರಕ್ಷೆಯಲ್ಲಿರುವ ಸರ್ಕಾರಿ ದಾಖಲೆಗಳನ್ನು ಅನಗತ್ಯವಾಗಿ ಹೊರಗಡೆ ತೆಗೆದುಕೊಂಡು ಹೋಗಿರುವುದು ಕಾನೂನು ಬಾಹಿರವಾಗಿದೆ. ಅಭಿಲೇಖಾಲಯ ಶಾಖೆಯ ಜವಾಬ್ದಾರಿ ಹೊತ್ತಿದ್ದ ವಿಷಯ ನಿರ್ವಾಹಕರು ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಈ ಹಿನ್ನೆಲೆಯಲ್ಲಿ ಅಭಿಲೇಖಾಲಯ ಶಾಖಾ ವಿಷಯ ನಿರ್ವಾಹಕ ಎಂ.ಅಶೋಕ್ ಕುಮಾರ್, ದ್ವಿ.ದ.ಸ ರವರನ್ನು ದಿನಾಂಕ 16.09.2026 ರಂದು ಅಮಾನತುಗೊಳಿಸಲಾಗಿದೆ.

ಈ ರೀತಿ ಪ್ರಮುಖ ದಾಖಲೆಗಳನ್ನು ಎಸೆಯಲು ಕಾರಣವನ್ನು ತಿಳಿಯುವ ಅಗತ್ಯತೆ ಇರುವುದರಿಂದ ಮತ್ತು ಹೆಚ್ಚಿನ ತನಿಖೆ ಅಗತ್ಯವಿರುವುದರಿಂದ ಕರ್ನಾಟಕ ರಾಜ್ಯ ಸಾರ್ವಜನಿಕ ದಾಖಲೆಗಳ ಅಧಿನಿಯಮ-2010ರ ನಿಯಮ 9ರ ಪ್ರಕಾರ ಪ್ರಕರಣ ದಾಖಲು ಮಾಡಲು ತಹಶೀಲ್ದಾರ್ ನಾಗಮಂಗಲ ತಾಲ್ಲೂಕು ರವರಿಗೆ ಆದೇಶಿಸಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

# ಪತ್ನಿ ಮೇಲೆ ಮಚ್ಚಿನಿಂದ ಹಲ್ಲೆ ಮಾಡಿ ಆಸಿಡ್ ಎರಚಿದ ಪತಿ

ಬೆಂಗಳೂರ : ಜೆ.ಪಿ ನಗರದಲ್ಲಿ ಬೆಚ್ಚಿಬೀಳಿಸುವ ಘಟನೆ ನಡೆದಿದ್ದು, ಹಾಡಹಗಲೇ ಪತ್ನಿಯನ್ನು ಅಟ್ಟಾಡಿಸಿಕೊಂಡು ಹೋಗಿ ಮಚ್ಚಿನಿಂದ ಹಲ್ಲೆ ಮಾಡಿ ಆಸಿಡ್ ಎರಚಿರುವ ಘಟನೆ ನಡೆದಿದೆ. ಜೆ.ಪಿ.ನಗರದ ನಾರಾಯಣ ಆಸ್ಪತ್ರೆಯಲ್ಲಿ ನರ್ಸ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಮಧುಮಿತಾ ಹಲ್ಲೆಗೊಳಗಾದ ಸಂತ್ರಸ್ತೆ.

2023 ರಲ್ಲಿ ತಮಿಳುನಾಡಿನ ಮಧುರೈ ಮೂಲದ ನಿವಾಸಿ ವೆಂಕಟೇಶನ್ ಎಂಬಾತನನ್ನು ಮಧುಮಿತಾ ವಿವಾಹವಾಗಿದ್ದರು. ನಂತರ ಅವರ ದಾಂಪತ್ಯ ಜೀವನದಲ್ಲಿ ಬಿರುಕುಂಟಾಗಿದೆ. ವೈವಾಹಿಕ ಭಿನ್ನಾಭಿಪ್ರಾಯ ಹಾಗೂ ಕೌಟುಂಬಿಕ ಕಲಹದ ಕಾರಣಗಳಿಂದ ದಂಪತಿ ಬೇರ್ಪಟ್ಟು ಕಳೆದ ಒಂದು ವರ್ಷದಿಂದ ಪ್ರತ್ಯೇಕವಾಗಿದ್ದಾರೆ.

ವೆಂಕಟೇಶನ್ ಚೆನ್ನೈನಲ್ಲಿ ವಾಸವಾಗಿದ್ದರೆ, ಮಧುಮಿತಾ ಬೆಂಗಳೂರಿನಲ್ಲಿ ನೆಲೆಸಿದ್ದಾರೆ. ಜೆ.ಪಿ.ನಗರದ ನಾರಾಯಣ ಆಸ್ಪತ್ರೆಯಲ್ಲಿ ಕಳೆದ ಒಂದೂವರೆ ವರ್ಷದಿಂದ ನರ್ಸ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.ಇಂದು ಬೆಳಗ್ಗೆ ಮಧುಮಿತಾ ಅವರು ಎಂದಿನಂತೆ ಆಸ್ಪತ್ರೆಗೆ ಬಂದಿದ್ದಾರೆ. ಬೆಳಗ್ಗೆ 9.15 ರ ಸುಮಾರಿನಲ್ಲಿ ಮಧುಮಿತಾ ಅವರು ತಿಂಡಿ ತಿನ್ನಲು ಆಸ್ಪತ್ರೆಯಿಂದ ಹೊರಗೆ ಬಂದಿದ್ದಾರೆ.

ಚೆನ್ನೈನಿಂದ ನಗರಕ್ಕೆ ಬಂದಿದ್ದ ವೆಂಕಟೇಶನ್ ಇದೇ ಸಮಯಕ್ಕಾಗಿ ಕಾದು ಸಂಚು ರೂಪಿಸಿ



ಇಂದು ಬೆಳಗ್ಗೆ ಪತ್ನಿ ಕೆಲಸ ಮಾಡುತ್ತಿದ್ದ ಆಸ್ಪತ್ರೆ ಬಳಿ ಬೈಕ್‌ನಲ್ಲಿ ಬಂದು ಹೊಂಚು ಹಾಕಿ ತಾನು ತಂದಿದ್ದ ಮಾರಕಾಸ್ತ್ರದಿಂದ ಏಕಾಏಕಿ ಆಕೆಯ ಮೇಲೆ ದಾಳಿ ಮಾಡಲು ಮುಂದಾಗಿದ್ದಾನೆ.ತಕ್ಷಣ ಆಕೆ ಆತನಿಂದ ತಪ್ಪಿಸಿಕೊಳ್ಳಲು ಚೀರಾಡಿಕೊಂಡು ಆಸ್ಪತ್ರೆಯ ಪಾರ್ಕಿಂಗ್ ಜಾಗಕ್ಕೆ ಓಡಿದರೂ ಬಿಡದೆ ಆಕೆಯನ್ನು ಸಿನಿಮೀಯ ರೀತಿಯಲ್ಲಿ ಅಟ್ಟಾಡಿಸಿಕೊಂಡು ಹೋಗಿ ಮಾರಕಾಸ್ತ್ರದಿಂದ ಹಲ್ಲೆ ನಡೆಸಿದ್ದಲ್ಲದೇ ಆಸಿಡ್ ಎರಚಿ ಪರಾರಿಯಾಗಲು ಯತ್ನಿಸಿದ್ದಾನೆ.

ಆ ಸಂದರ್ಭದಲ್ಲಿ ರಸ್ತೆಯ ಪಕ್ಕದ ಸಿಗ್ನಲ್‌ನಲ್ಲಿ ಕರ್ತವ್ಯದಲ್ಲಿದ್ದ ಸಂಚಾರಿ ಪೊಲೀಸರು ಸಾರ್ವಜನಿಕರ ಸಹಾಯದಿಂದ ಆತನನ್ನು ವಶಕ್ಕೆ ಪಡೆದು ಬಳಿಕ ಜೆ.ಪಿ.ನಗರ ಠಾಣೆ ಪೊಲೀಸರಿಗೆ ಹಸ್ತಾಂತರಿಸಿದ್ದಾರೆ.

ಪತಿಯಿಂದ ಹಲ್ಲೆಗೊಳಗಾದ ಮಧುಮಿತಾ ಅವರನ್ನು ಸ್ಥಳೀಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದ್ದು ಆಕೆಯ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನಾ ಸ್ಥಳಕ್ಕೆ ಜೆ.ಪಿನಗರ ಠಾಣೆ ಪೊಲೀಸರು ಆಗಮಿಸಿ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಕಣ್ಮನ ಸೆಳೆಯುತ್ತಿರುವ ಸಿದ್ಧಗಂಗಾ ಸಂಸ್ಥೆಯಲ್ಲಿ ಪ್ರತಿಷ್ಠಾಪಿಸಿರುವ
# 14 ಅಡಿ ಎತ್ತರದ ಪರಿಸರ ಸ್ನೇಹಿ ಗಣಪ!




ದಾವಣಗೆರೆ: ನಗರದ ಶ್ರೀ ಸಿದ್ಧಗಂಗಾ ಸಂಸ್ಥೆಯಲ್ಲಿ ಈ ವರ್ಷವೂ ಅತ್ಯಂತ ವಿಶಿಷ್ಟ ಹಾಗೂ ಪರಿಸರ ಸ್ನೇಹಿ ರೀತಿಯಲ್ಲಿ ಗಣೇಶ ಚತುರ್ಥಿಯನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ. ಕಳೆದ 13 ವರ್ಷಗಳ ಸುದೀರ್ಘ ಪರಿಪಾಠದಂತೆ, ಈ ಬಾರಿಯೂ ಶಾಲೆಯ ರಂಗಮಂದಿರದಲ್ಲಿ 14 ಅಡಿ ಎತ್ತರದ ಬೃಹತ್ ಪೇಪರ್ ಗಣಪತಿಯನ್ನು ಪ್ರತಿಷ್ಠಾಪಿಸಲಾಗಿದೆ.

ಸಂಸ್ಥೆಯ ನಿರ್ದೇಶಕರಾದ ಡಾ. ಜಯಂತ್, ಚಿತ್ರಕಲಾ ಶಿಕ್ಷಕರಾದ ಸ್ವಾತಿ ಜಿ., ನಟ-ರಾಜ ಶೃಂಗಾರ, ಹೀನಾ ಕೌಸರ್, ಮುಜಸ್ಸಿಂ, ಲಕ್ಷ್ಮಿ, ಸ್ನೇಹಾ ಹಾಗೂ ಆಸಕ್ತ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ತಂಡವು ಹಬ್ಬದ ಒಂದು ವಾರಕ್ಕೂ ಮುಂಚಿತವಾಗಿ ಈ ವಿಗ್ರಹ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಿ ಹಬ್ಬದ ಹಿಂದಿನ ದಿನ ಪೂರ್ಣಗೊಳಿಸಿದೆ.

ಈ ಪರಿಸರ ಸ್ನೇಹಿ ಗಣಪತಿಯ ತಯಾರಿ-ಕೆಗೆ 30 ಕೆ.ಜಿ. ನ್ಯೂಸ್ ಪೇಪರ್, 10 ಕೆ.ಜಿ. ಮರಗೆಣಸಿನ ಪುಡಿಯ ಅಂಟು ಹಾಗೂ ಬಣ್ಣಕ್ಕಾಗಿ ಇದ್ದಲಿನ ಪುಡಿಯನ್ನು ಬಳಸಲಾಗಿದೆ. ಇಷ್ಟೊಂದು ಬೃಹತ್ ಆಕಾರದಲ್ಲಿದ್ದರೂ ವಿಗ್ರಹದ ಒಟ್ಟು ತೂಕ ಕೇವಲ 40 ಕಿಲೋ ಮಾತ್ರ. ಇದನ್ನು ಕೇವಲ ನಾಲ್ಕು ಮಕ್ಕಳು ಸುಲಭವಾಗಿ ಎತ್ತಬಹುದಾದಷ್ಟು ಹಗುರವಾಗಿದೆ ಎಂಬುದು ವಿಶೇಷ.

ಸಾಂಪ್ರದಾಯಿಕ ಉಡುಗೆ-ತೊಡುಗೆಗಳಲ್ಲಿದ್ದ ವಿದ್ಯಾರ್ಥಿಗಳು ಅಂಬೇಡ್ಕರ್ ಸರ್ಕಲ್‌ನಿಂದ ಅಲಂಕೃತ ರಥದಲ್ಲಿದ್ದ ಗಣೇಶನನ್ನು ಎಳೆತಂದರು. ಮೆರವಣಿಗೆಯಲ್ಲಿ ಲಕ್ಷ್ಮಿ, ಸರಸ್ವತಿ, ಶ್ರೀರಾಮನ ವೇಷಧಾರಿಗಳು, ನಂದಿಕೋಲು, ಪಟಕುಣಿತ ಹಾಗೂ ಡೊಳ್ಳು ಕುಣಿತದಂತಹ ಜಾನಪದ ಕಲಾತಂಡಗಳು ಸಾರ್ವಜನಿಕರ ಗಮನ ಸೆಳೆದವು.

ಶಾಲೆಯ ಮಂಟಪದಲ್ಲಿ ವಿರಾಜಮಾನನಾಗಿರುವ ಈ ಗಣಪತಿಗೆ ಪ್ರತಿದಿನ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಾವೈಕ್ಯತೆಯಿಂದ ಪೂಜೆ ನೆರವೇರಿಸುತ್ತಿದ್ದಾರೆ. ಈ ಹಗುರವಾದ ಪರಿಸರ ಸ್ನೇಹಿ ಗಣಪತಿಯನ್ನು ಸೆಪ್ಟೆಂಬರ್ 25 ರಂದು ವಿಸರ್ಜಿಸಲಾಗುತ್ತಿದ್ದು, ಸಾರ್ವಜನಿಕರು ಬಂದು ವೀಕ್ಷಿಸುವಂತೆ ಡಾ. ಜಯಂತ್ ಮನವಿ ಮಾಡಿದ್ದಾರೆ.

## ನಾನೀಗ ಸಿಎಂ ಸ್ಥಾನದಲ್ಲಿಲ್ಲ: ಸಿದ್ದರಾಮಯ್ಯ ಬೇಸರ

ಆಗಬಾರದು ಅಂತ ಕೆಲವರು ಇದ್ದಾರೆ. ನಾನು 8 ವರ್ಷ ಸಿಎಂ ಆಗಿದ್ದಾಗ ಬದಲಾವಣೆಗೆ ಪ್ರಯತ್ನ ಪಟ್ಟೆ. ಖಅಖಕ-ಖಖಕ ಕಾಯ್ದೆಯನ್ನ ಕೇಂದ್ರ ಸರ್ಕಾರ ಯಾಕೆ ಮಾಡಿಲ್ಲ? ಬಿಜೆಪಿಗೆ ವೋಟು ಕೊಟ್ಟು ಜನ ಕಳಿಸಿದ್ದಾರಲ್ಲಾ, ಬಹಳ ಜನ ಹುಡುಗರು ಮೋದಿ ಮೋದಿ ಅಂತಿದ್ರು, ಈಗ ಸೈಲೆಂಟ್ ಆಗಿದ್ದಾರೆ ಎಂದು ಕುಟುಕಿದ್ದಾರೆ.

ಅನಂತ ಜನಶಕ್ತಿ ಪತ್ರಿಕೆಗೆ ಜಿಲ್ಲಾ ಹಾಗೂ ತಾಲೂಕು ವರದಿಗಾರರು ಬೇಕಾಗಿದ್ದಾರೆ..
ಆಸಕ್ತಿ ಇದ್ದವರು ಸಂಪರ್ಕಿಸಿ

## ವಿಜಯನಗರ ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ಬದ್ಧ; ಎಲ್ಲರೂ ಕೈ ಜೋಡಿಸಲಿ: ಸಚಿವ ಬಸವಂತಪ್ಪ

1ನೇ ಪುಟದಿಂಧ..

ನಿಜಾಮರ ಆಳ್ವಿಕೆಗೆ ಒಳಪಟ್ಟಿದ್ದ ಕಲ್ಬುರ್ಗಿ, ಬೀದರ್, ರಾಯಚೂರು, ಕೊಪ್ಪಳ, ಯಾದಗಿರಿ ಹಾಗೂ ಬಳ್ಳಾರಿ ಪ್ರದೇಶಗಳ ಜನರಿಗೆ ಸ್ವಾತಂತ್ರ್ಯ ಸಿಕ್ಕಿರಲಿಲ್ಲ. ಭಾರತ ಒಕ್ಕೂಟದೊಂದಿಗೆ ವಿಲೀನಗೊಳ್ಳುವ ಉದ್ದೇಶದಿಂದ ಸ್ವಾಮಿ ರಮಾನಂದ ತೀರ್ಥರ ನಾಯಕತ್ವದಲ್ಲಿ ಈ ಭಾಗದ ಜನರು ಅಹಿಂಸಾತ್ಮಕ ಚಳವಳಿ ಹಾಗೂ ಹೋರಾಟವನ್ನು ಪ್ರಾರಂಭಿಸಿದರು.

ಸ್ವಾಮಿ ರಮಾನಂದ ತೀರ್ಥರು, ಡಾ. ಮೇಲ್ಕೋಟೆ, ಅನ್ನದಾನಯ್ಯ ಪುರಾಣಿಕ, ಪ್ರಭುರಾಜ್ ಪಾಟೀಲ್, ಶಿವಮೂರ್ತಿಸ್ವಾಮಿ ಅಳವಂಡಿ, ಡಾ. ಚುರ್ಚಿ, ಅಳವಂದರ್, ಭೀಮಸೇನರಾವ್, ಶ್ರೀನಿವಾಸಾಚಾರ್, ಹನುಮಂತರಾವ್ ಸೇರಿದಂತೆ ಪ್ರಮುಖ ನಾಯಕರು ತಮ್ಮ ಪ್ರಾಣವನ್ನೂ ಲೆಕ್ಕಿಸದೆ ಹೋರಾಡಿದ್ದು ಇವರ ತ್ಯಾಗವನ್ನು ಸಚಿವರು ಸ್ಮರಿಸಿದರು. ಆಪರೇಷನ್ ಪೋಲೋ ಮತ್ತು ಸರ್ದಾರ್ ಪಟೇಲರ ದಿಟ್ಟ ನಿರ್ಧಾರ: ಭಾರತದ ಮೊದಲ ಉಪ ಪ್ರಧಾನಿಗಳು ಹಾಗೂ ಅಂದಿನ ಕೇಂದ್ರ ಗೃಹ ಸಚಿವರಾಗಿದ್ದ, ಉಕ್ಕಿನ ಮನುಷ್ಯರೆಂದು ಖ್ಯಾತರಾಗಿದ್ದ ಸರ್ದಾರ್

5ನೇ ಪುಟಕ್ಕೆ...

# ಭಾನುವಾರದಂದು ಹಿಂದೂ ಮಹಾ ಗಣಪತಿ ಬೃಹತ್ ಶೋಭಾ ಯಾತ್ರೆ : ಶರಣ ಗೌಡ



ಬಳ್ಳಾರಿ : ನಗರದ ಸೆಂಟೇನರಿ ಹಾಲ್ನಲ್ಲಿ ಪ್ರಮುಖ ಆಕರ್ಷಣೆಯಾಗಿರುವ ಹಿಂದೂ ಮಹಾ ಗಣಪತಿ ಮೂರ್ತಿಯನ್ನು ಅಂತರಾಷ್ಟ್ರೀಯ ಹಿಂದೂ ಪರಿಷತ್ ಹಾಗೂ ರಾಷ್ಟ್ರೀಯ ಬಜರಂಗದಳ ವತಿಯಿಂದ ಪ್ರತಿಷ್ಠಾಪಿಸಲಾಗಿದ್ದು ಈ ಮಹಾ ಗಣಪತಿಯ ಬೃಹತ್ ಶೋಭಾ ಯಾತ್ರೆಯನ್ನು ಸೆಪ್ಟಂಬರ್ 20 ರ ಭಾನುವಾರದಂದು ಹಮ್ಮಿಕೊಳ್ಳಲಾಗಿದೆ ಎಂದು ಶರಣ ಪಟೇಲ್ ತಿಳಿಸಿದರು.

ಇಂದು ಸೆಂಟೇನರಿ ಹಾಲ್ ನಲ್ಲಿ ಪತ್ರಕರ್ತರನ್ನು ಉದ್ದೇಶಿಸಿ ಮಾತನಾಡಿದ ಶರಣಗೌಡ ಈ ಬೃಹತ್ ಶೋಭಾ ಯಾತ್ರೆಯು ರಾಯಲ್ ಸರ್ಕಲ್ ಬ್ರುಸ್ಪೇಟ್ ಸರ್ಕಲ್ ಮೋದಿ ಸರ್ಕಲ್ ಮಾರ್ಗವಾಗಿ ಸಾಗಲಿದೆ ಈ ಶೋಭಾ ಯಾತ್ರೆಯನ್ನು ಅತ್ಯಂತ ಅದ್ದೂರಿಯಾಗಿ ಹಮ್ಮಿಕೊಳ್ಳಲಾಗಿದ್ದು ಈ ಶೋಭಾ ಯಾತ್ರೆಯಲ್ಲಿ ನಮ್ಮ ದೇಶಿಯ ಕಲೆ ಮಲ್ಲಕಂಬವನ್ನು ಚಲಿಸುವ ವಾಹನದಲ್ಲಿ ಪ್ರದರ್ಶಿಸುವರು ಜೊತೆಗೆ ಮಂಗಳೂರು ಭಾಗದ ಕಾಂತಾರ ದೈವ ಕೋಲಾ ಸಹ ಈ ಶೋಭ ಯಾತ್ರೆಯಲ್ಲಿ ಪಾಲ್ಗೊಳ್ಳಲಿದೆ ಜೊತೆಗೆ ಕೇರಳದ ಸಾಂಸ್ಕೃತಿಕ ತಂಡಗಳು ಸಹ ಭಾಗವಹಿಸಲಿವೆ ಕಾರಣ ನಗರದ ಸಾರ್ವಜನಿಕರು, ಕುಟುಂಬ ಸಮೇತರಾಗಿ ಈ ಶೋಭಾ ಯಾತ್ರೆಯಲ್ಲಿ ಭಾಗವಹಿಸಿ ವಿನಾಯಕನ ಕೃಪೆಗೆ ಪಾತ್ರರಾಗಬೇಕೆಂದು ವಿನಂತಿಸಿದರು. ಈ ಶೋಭಾ ಯಾತ್ರೆಯ ಅಂಗವಾಗಿ ಗೋಲ್ಡನ್ ಕೋಟೆಡ್ ಗಣೇಶ ಮೂರ್ತಿಯನ್ನು ಗೆಲ್ಲುವ ಸುವರ್ಣ ಅವಕಾಶವಿದ್ದು ಭಕ್ತಾದಿಗಳು ಭಾನುವಾರದಂದು ಸಂಜೆ 4 ಗಂಟೆಗೆ ಸೆಂಟೇನರಿ ಹಾಲ್ಗೆ ಬಂದು ತಮಗೆ ನೀಡಿದ ಡಿಪ್ ಕೋಪನನ್ನು ಡಬ್ಬಿಯಲ್ಲಿ ಹಾಕಬೇಕು ಈ ಕೋಪನಗಳನ್ನು ರಾಯಲ್ ಸರ್ಕಲ್ ಮತ್ತು ಬ್ರೂಸ್ ಪೇಟೆಯಲ್ಲಿ ಎತ್ತಲಾಗುವುದು ಮತ್ತು ಪ್ರತಿ ಸರ್ಕಲ್ ನಲ್ಲಿ 10 ಮತ್ತು 11 ಗಣೇಶ ಮೂರ್ತಿಗಳನ್ನು ವಿಜೇತರಿಗೆ ನೀಡಲಾಗುವುದು ಎಲ್ಲರೂ ತಮ್ಮ ಅದೃಷ್ಟ ಪರೀಕ್ಷೆಯನ್ನು ಈ ಡಿಪ್ ನಲ್ಲಿ ಭಾಗವಹಿಸುವ ಮೂಲಕ ಮಾಡಿಕೊಳ್ಳಬೇಕೆಂದರು.

ಈ ಪತ್ರಿಕಾಗೋಷ್ಠಿಯಲ್ಲಿ ಇಂದು ಮಹಾಗಣಪತಿ ಉತ್ಸವ ಸಮಿತಿಯ ಅನೇಕರಿದ್ದರು.

ಒಂದನೇ ಪುಟದಿಂದ..

# ಜನರ ಏಳಿಗೆಯೇ ಸರ್ಕಾರದ ಸಂಕಲ್ಪ: ರಘುಮೂರ್ತಿ

ಅವರು ಮಾತನಾಡಿದರು.1947ರ ಆಗಸ್ಟ್ 15ರಂದು ಇಡೀ ಭಾರತಕ್ಕೆ ಸ್ವಾತಂತ್ರ್ಯ ಬಂದರೂ, ಹೈದರಾಬಾದ್ ನಿಜಾಮ ಮೀರ್ ಉಸ್ಮಾನ್ ಅಲಿ ಖಾನ್ ಭಾರತ ಒಕ್ಕೂಟಕ್ಕೆ ಸೇರಲು ನಿರಾಕರಿಸಿ ಸ್ವತಂತ್ರವಾಗಿರಲು ನಿರ್ಧರಿಸಿದ್ದರಿಂದ ಕಲ್ಯಾಣ ಕರ್ನಾಟಕದ ಆಗಿನ ಕಲ್ಬುರ್ಗಿ, ಬೀದರ್, ರಾಯಚೂರು ಸೇರಿದಂತೆ ಇಂದಿನ ಏಳು ಜಿಲ್ಲೆಗಳಿಗೆ ಸ್ವಾತಂತ್ರ್ಯ ಸಿಕ್ಕಿರಲಿಲ್ಲ. ಕಾಸಿಂ ರಜ್ವಿ ನೇತೃತ್ವದ ರಜಾಕಾರರ ದೌರ್ಜನ್ಯದ ವಿರುದ್ಧ ಹೋರಾಟಗಾರರು ರಣಕಹಳೆ ಊದಿದರು. ಅಂತಿಮವಾಗಿ ಸರ್ದಾರ್ ವಲ್ಲಭಭಾಯಿ ಪಟೇಲ್ ಹಾಗೂ ಜವಾಹರಲಾಲ್ ನೆಹರೂ ಅವರ ದಿಟ್ಟ ನಿರ್ಧಾರದ ಫಲವಾಗಿ ನಡೆದ ಐದು ದಿನಗಳ ಸೈನಿಕ ಕಾರ್ಯಾಚರಣೆಯಿಂದ 1948ರ ಸೆಪ್ಟೆಂಬರ್ 17ರಂದು ಈ ಭಾಗಕ್ಕೆ ಮುಕ್ತಿ ದೊರೆಯಿತು. ಈ ಐತಿಹಾಸಿಕ ಹೋರಾಟದಲ್ಲಿ ತ್ಯಾಗ ಬಲಿದಾನ ಮಾಡಿದ ಎಲ್ಲ ಮಹನೀಯರನ್ನು ಸ್ಮರಿಸಬೇಕಿದೆ ಎಂದರು.ಯುಪಿಎ ಸರ್ಕಾರದ ಅವಧಿಯಲ್ಲಿ ಪ್ರಧಾನಿ ಮನಮೋಹನ್ ಸಿಂಗ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ದಿವಂಗತ ಧರ್ಮಸಿಂಗ್ ಅವರ ಪ್ರಯತ್ನದಿಂದಾಗಿ ಸಂವಿಧಾನದ 371 (ಜೆ) ತಿದ್ದುಪಡಿಯ ಮೂಲಕ ಈ ಭಾಗಕ್ಕೆ ವಿಶೇಷ ಸ್ಥಾನಮಾನ ಲಭಿಸಿತು. ಇದರಿಂದಾಗಿ ಶಿಕ್ಷಣ, ಉದ್ಯೋಗ ಹಾಗೂ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಮೀಸಲಾತಿ ಮತ್ತು ಅನುದಾನ ಒದಗಿಸಲು ಸಾಧ್ಯವಾಗಿದೆ ಎಂದು ತಿಳಿಸಿದರು.ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಮೂಲಕ ಈವರೆಗೆ ಸುಮಾರು 18,000 ಕೋಟಿ ರೂ. ವೆಚ್ಚ ಮಾಡಲಾಗಿದ್ದು, ಪ್ರಮುಖ ವಲಯಗಳಿಗೆ ಆದ್ಯತೆ ನೀಡಲಾಗಿದೆ. ಶಿಕ್ಷಣಕ್ಕೆ 2,202 ಕೋಟಿ, ಆರೋಗ್ಯಕ್ಕೆ 2,071 ಕೋಟಿ, ಉದ್ಯೋಗಾವಕಾಶಕ್ಕೆ 974 ಕೋಟಿ, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ 498 ಕೋಟಿ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕಲ್ಯಾಣಕ್ಕೆ 638 ಕೋಟಿ, ಅಲ್ಪಸಂಖ್ಯಾತರ ಅಭಿವೃದ್ಧಿಗೆ 313 ಕೋಟಿ, ಅಂತರ್ಜಲ ಅಭಿವೃದ್ಧಿಗೆ 425 ಕೋಟಿ, ಕಲ್ಯಾಣ ಪಥಕ್ಕೆ 1,000 ಕೋಟಿ, ಪ್ರಜಾಸೌಧಗಳ ನಿರ್ಮಾಣಕ್ಕೆ 166 ಕೋಟಿ ರೂ. ವ್ಯಯಿಸಲಾಗಿದೆ ಎಂದು ಮಾಹಿತಿ ನೀಡಿದರು.

ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ತಲೆದೋರಿದ್ದು, ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಅನ್ವಯ ಮಳೆಯ ಕೊರತೆ ಹಾಗೂ 3 ವಾರಗಳ ಸತತ ಒಣ ಹವೆ/ಡ್ರೈ ಸ್ಪೆಲ್ ಆಧಾರದ ಮೇಲೆ ಈಗಾಗಲೇ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಮುಂದಿನ ದಿನಗಳಲ್ಲಿ ಉಳಿದ ಅರ್ಹ ತಾಲೂಕುಗಳನ್ನೂ ಪಟ್ಟಿಗೆ ಸೇರಿಸಿ, ಕೇಂದ್ರ ಸರ್ಕಾರಕ್ಕೆ ಪರಿಹಾರ ಪ್ರಸ್ತಾವನೆ ಸಲ್ಲಿಸಲಾಗುವುದು. ಬರ ಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಒದಗಿಸುವುದರ ಜೊತೆಗೆ, ವಿಬಿಜಿ ರಾಮ್‌ಜಿ ಉದ್ಯೋಗ ಖಾತರಿ ಯೋಜನೆಯಡಿ ಸ್ಥಳೀಯವಾಗಿ ಜನರಿಗೆ ಉದ್ಯೋಗ ನೀಡಿ ಗುಳೆ ಹೋಗುವುದನ್ನು ತಡೆಯಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಾಮಾಜಿಕ ಸಮಾನತೆಯ ಆಶಯದಂತೆ ಸರ್ಕಾರ ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತ ಜಾರಿಯಲ್ಲಿರುವ ಐದು ಗ್ಯಾರಂಟಿ ಯೋಜನೆಗಳಿಗೆ 1,41,210 ಕೋಟಿಗಳನ್ನು ವಿನಿಯೋಗಿಸಿ 2.70 ಕೋಟಿ ಕುಟುಂಬಗಳಿಗೆ ಆಸರೆಯಾಗಲಾಗಿದೆ ಎಂದು ವಿವರಿಸಿದರು.ಜೊತೆಗೆ, ಗ್ರಾಮೀಣ ಹಾಗೂ ನಗರ ಪ್ರದೇಶದ ಯುವಕರಲ್ಲಿ ನಾಯಕತ್ವ ಗುಣ ಬೆಳೆಸಲು 10,000 'ಭಾರತ್ ಜೋಡೋ ಯುವ ಸಂಘ'ಗಳ ಸ್ಥಾಪನೆ, ವಿದ್ಯಾರ್ಥಿಗಳಿಗೆ ಉಚಿತ ಬಸ್ ಸೌಲಭ್ಯ, 1,000 ಕರ್ನಾಟಕ ಪಬ್ಲಿಕ್ ಶಾಲೆಗಳ ಆರಂಭ ಹಾಗೂ ಬೆಂಗಳೂರಿನಲ್ಲಿ ಕೃತಕ ಬುದ್ಧಿಮತ್ತೆ (ಎಐ) ವಿಶ್ವವಿದ್ಯಾಲಯ ಸ್ಥಾಪನೆಯಂತಹ ಮುನ್ನೋಟದ ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆ. ಜನಪ್ರತಿನಿಧಿಗಳು ಕೇವಲ ಟೀಕೆ, ಆರೋಪಗಳಿಗೆ ಸೀಮಿತವಾಗದೆ ಜನರ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಕೆಲಸಗಳಲ್ಲಿ ಕೈಜೋಡಿಸಬೇಕೆಂದು ಕರೆ ನೀಡಿದರು.ಸಂಸದ ಈ.ತುಕಾರಾಮ್ ಅವರು ಮಾತನಾಡಿ, ಹೈದರಾಬಾದ್ ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರದ ಬದ್ಧತೆ ಹಾಗೂ ಕೊಡುಗೆಗಳು ಐತಿಹಾಸಿಕವಾಗಿವೆ. ಕಾಂಗ್ರೆಸ್ ಸರ್ಕಾರಗಳು ತಂದ ಮೀಸಲಾತಿ ಕ್ರಮಗಳಿಂದಾಗಿ ಇಂದು ಹಿಂದುಳಿದ, ಎಸ್‌ಸಿ/ಎಸ್‌ಟಿ ವರ್ಗಗಳ ನಾಯಕರು ಶಾಸಕರು, ಸಚಿವರು, ಸಂಸದರಾಗಲು ಹಾಗೂ ಉನ್ನತ ಹುದ್ದೆಗಳನ್ನು ಅಲಂಕರಿಸಲು ಸಾಧ್ಯವಾಗಿದೆ ಎಂದು ಹೇಳಿದರು.ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ನೀಡಲಾದ ಪ್ರೊ. ಗೋವಿಂದರಾವ್ ವರದಿಯನ್ನು ಉಲ್ಲೇಖಿಸಿದ ಅವರು, ಪ್ರಸ್ತುತ ರಾಜ್ಯದ 236 ತಾಲೂಕುಗಳ ಪೈಕಿ 93 ಅತ್ಯಂತ ಹಿಂದುಳಿದ, 36 ಹೆಚ್ಚು ಹಿಂದುಳಿದ ಹಾಗೂ 43 ಹಿಂದುಳಿದ ತಾಲೂಕುಗಳಾಗಿ ಗುರುತಿಸಲ್ಪಟ್ಟಿವೆ. ಕೇವಲ 64 ತಾಲೂಕುಗಳು ಮಾತ್ರ ಅಭಿವೃದ್ಧಿ ಹೊಂದಿದ್ದು, ಪ್ರಾದೇಶಿಕ ಅಸಮಾನತೆ ಹೋಗಲಾಡಿಸಲು ಶಾಸಕಾಂಗ ಹಾಗೂ ಕಾರ್ಯಾಂಗ ಇನ್ನಷ್ಟು ಎಚ್ಚರಿಕೆಯಿಂದ ಶ್ರಮಿಸಬೇಕಿದೆ ಎಂದು ತಿಳಿಸಿದರು. ಅಧಿಕಾರ, ಹುದ್ದೆಗಳು ಶಾಶ್ವತವಲ್ಲ; ಜನರಿಗೆ ಮಾಡುವ ಕೆಲಸಗಳು ಮತ್ತು ಹಾಕಿಕೊಡುವ ಹೆಜ್ಜೆಗುರುತುಗಳು ಮಾತ್ರ ಶಾಶ್ವತ. ಪ್ರಜಾಪ್ರಭುತ್ವದ ನಾಲ್ಕೂ ಅಂಗಗಳು ಒಟ್ಟಾಗಿ ಈ ಭಾಗದ ಭವಿಷ್ಯ ರೂಪಿಸಲು ನಿಷ್ಪಕ್ಷಪಾತವಾಗಿ ಕೆಲಸ ಮಾಡಬೇಕು ಎಂದು ಕರೆ ನೀಡಿದರು.ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಹೋರಾಟ ಸಮಿತಿಯ ಗೌರವಾಧ್ಯಕ್ಷ ಸಿರಿಗೇರಿ ಪನ್ನರಾಜ್ ಅವರು ವಿಶೇಷ ಉಪನ್ಯಾಸ ನೀಡಿದರು.

ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಶಾಲಾ– ಕಾಲೇಜು ಮಟ್ಟದಲ್ಲಿ ಏರ್ಪಡಿಸಿದ್ದ ಪ್ರಬಂಧ, ಆಶು–ಭಾಷಣ ಹಾಗೂ ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರ ಹಾಗೂ ಪುಸ್ತಕ ವಿತರಿಸಲಾಯಿತು. ಇದೇ ಸಂದರ್ಭದಲ್ಲಿ 'ಹೈದರಾಬಾದ್ ವಿಮೋಚನಾ ಸುತ್ತ–ಮುತ್ತ' ವಿಶೇಷ ಕೈಪಿಡಿಯನ್ನು ಗಣ್ಯರು ಅನಾವರಣಗೊಳಿಸಿದರು. ಬಳಿಕ 371(ಜೆ) ಅನುಷ್ಠಾನಕ್ಕಾಗಿ ಶ್ರಮಿಸಿದ ಹೋರಾಟಗಾರನ್ನು ಸನ್ಮಾನಿಸಿ ಗೌರವಿಸಲಾಯಿತು.ಸಮಾರಂಭದಲ್ಲಿ ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಸಂಡೂರು ಶಾಸಕಿ ಈ.ಅನ್ನಪೂರ್ಣ, ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ ಚಿದಾನಂದಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ .ಕೆ., ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕರಾದ ಡಾ.ಪಿ.ಎಸ್ ಹರ್ಷ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ.ಪಿ., ಜಿಲ್ಲಾ ಪಂಚಾಯತ್ ಸಿಇಒ ಮಹಮ್ಮದ್ ಹಾರಿಸ್ ಸುಮೇರ್, ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್ ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರು, ಇನ್ನಿತರರು ಉಪಸ್ಥಿತರಿದ್ದರು.

# ಬಳ್ಳಾರಿಯಲ್ಲಿ ವಿಜೃಂಭಣೆಯ ವಿಶ್ವಕರ್ಮ ಜಯಂತಿ

## ಕರಕುಶಲತೆಯ ಜೊತೆ ಶಿಕ್ಷಣವೂ ಅನಿವಾರ್ಯ: ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ



ಬಳ್ಳಾರಿ : ಅನಂತ ಜನಶಕ್ತಿ ನ್ಯೂಸ್: ವಿಶ್ವಕರ್ಮ ಸಮಾಜವು ಕರಕುಶಲತೆ ಮತ್ತು ಶಿಲ್ಪಕಲೆಯ ಕ್ಷೇತ್ರದಲ್ಲಿ ಜಗತ್ಪ್ರಸಿದ್ಧಿ ಪಡೆದಿದೆ. ಸಾಂಪ್ರದಾಯಿಕ ಕಸುಬಿನ ಜೊತೆಗೆ ಸಮುದಾಯದ ಮಕ್ಕಳು ಶಿಕ್ಷಣ–ಕ್ಕೂ ಹೆಚ್ಚಿನ ಒತ್ತು ನೀಡಬೇಕು ಎಂದು ಡಾ. ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಆಯೋಜಿಸಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಎಚ್.ಆರ್. ಗವಿಯಪ್ಪ ವೃತ್ತದ ಸಮೀಪದಲ್ಲಿ ಸೂಕ್ತ ನಿರ್ವಹಣೆಯಿಲ್ಲದೆ ಸೊರಗಿದ್ದ ವೃತ್ತಕ್ಕೆ ನಗರ ಶಾಸಕರು ಹಾಗೂ ಮಹಾನಗರ ಪಾಲಿಕೆಯ ಮೇಯರ್ ಅವರ ಮುತುವರ್ಜಿಯಿಂದ 'ವಿಶ್ವಕರ್ಮ ವೃತ್ತ' ಎಂದು ನಾಮಕರಣ ಮಾಡಲಾಗಿದೆ. ಈ ವೃತ್ತವನ್ನು ಹುಲ್ಲುಹಾಸು ಹಾಗೂ ಹಸಿರೀಕರಣದ ಮೂಲಕ ಸುಂದರಗೊಳಿಸುವುದರ ಜೊತೆಗೆ ಅಮರಶಿಲ್ಪಿ ಜಕಣಾಚಾರ್ಯರ ಆಕರ್ಷಕ ಪ್ರತಿಮೆ ಸ್ಥಾಪಿಸುವ ಗುರಿಯನ್ನು ಸಮುದಾಯ ಹೊಂದಿದೆ ಎಂದು ತಿಳಿಸಿದರು.

ಮಹಾನಗರ ಪಾಲಿಕೆಯ ಮಹಾಪೌರ ಪಿ. ಗಾದೆಪ್ಪ ಮಾತನಾಡಿ, ಜಗತ್ತಿಗೆ ದೇವರ ಪ್ರತಿರೂಪವನ್ನು ಸೃಷ್ಟಿಸಿಕೊಡುವ ವಿಶ್ವಕರ್ಮ ಸಮುದಾಯವು ಪರಮ ಪುಣ್ಯವಂತ ಸಮಾಜವಾಗಿದೆ. ಸಮಾಜದ ಪ್ರತಿಯೊಂದು ಸಣ್ಣ ಸಮುದಾಯವೂ ರಾಜಕೀಯವಾಗಿ ಹಾಗೂ ಸಾಮಾಜಿಕವಾಗಿ ಒಗ್ಗಟ್ಟಾದಾಗ ಮಾತ್ರ ಸರ್ಕಾರದಿಂದ ನ್ಯಾಯ ಮತ್ತು ಸೌಲಭ್ಯಗಳನ್ನು ಪಡೆಯಲು ಸಾಧ್ಯ ಎಂದು ಹೇಳಿದರು.

ಪ್ರಪಂಚದ ಪ್ರತಿಯೊಬ್ಬರೂ ದೇವರಿಗೆ ಕೈಮುಗಿದು ವರ ಬೇಡುತ್ತಾರೆ. ಆದರೆ ಭಕ್ತರು ಪೂಜಿಸುವ ದೇವರ ವಿಗ್ರಹಗಳನ್ನೇ ತಮ್ಮ ಕೈಚಳಕದಿಂದ ಸೃಷ್ಟಿಸುವ ಕಲೆ ಶಿಲ್ಪಿ ಸಮುದಾಯಕ್ಕೆ ಭಗವಂತ ನೀಡಿರುವ ದೊಡ್ಡ ವರವಾಗಿದೆ. ಸಮುದಾಯದ ಯಾವುದೇ ನ್ಯಾಯಯುತ ಬೇಡಿಕೆಗಳಿದ್ದರೂ ಸರ್ಕಾರ ಹಾಗೂ ಮಹಾನಗರ ಪಾಲಿಕೆ ಮಟ್ಟದಲ್ಲಿ ಸದಾ ಬೆಂಬಲವಾಗಿ ನಿಲ್ಲುವುದಾಗಿ ಭರವಸೆ ನೀಡಿದರು. ನ್ಯಾಯವಾದಿ ತ್ರಿವೇಣಿ ಪಿ. ಪತ್ತಾರ್ ವಿಶೇಷ ಉಪನ್ಯಾಸ ನೀಡುತ್ತಾ, ದೇಶದ ಕಲೆ, ವಾಸ್ತುಶಿಲ್ಪ ಹಾಗೂ ಸಾಂಸ್ಕೃತಿಕ ಪರಂಪರೆಗೆ ವಿಶ್ವಕರ್ಮ ಸಮಾಜ ನೀಡಿರುವ ಕೊಡುಗೆ ಅನನ್ಯವಾಗಿದೆ. ವಿಶ್ವಕರ್ಮ ಪರಂಪರೆಯು ಯಾವುದೇ ಒಂದು ನಿರ್ದಿಷ್ಟ ಮತ ಅಥವಾ ಜಾತಿಯ ಚೌಕಟ್ಟಿಗೆ ಸೀಮಿತವಾಗದೆ, ಸಮಸ್ತ ಜಗತ್ತಿನ ಸೃಷ್ಟಿಯ ಆದಿ ಪರಂಪರೆಯಾಗಿದೆ. ಋಗ್ವೇದದ ವಿಶ್ವಕರ್ಮ ಸೂಕ್ತ, ಉಪನಿಷತ್ತುಗಳು ಹಾಗೂ ಪುರಾಣಗಳಲ್ಲಿ ವಿಶ್ವಕರ್ಮನ ಮಹಿಮೆಯನ್ನು ಕೊಂಡಾಡಲಾಗಿದೆ ಎಂದು ವಿವರಿಸಿದರು.

**'ಹೊಸ ಚಿಗುರು ಹಳೆ ಬೇರು' ಕೂಡಿರಬೇಕೆಂಬಂತೆ ಸಮಾಜದ ಹಿರಿಯರು ಮತ್ತು ಕಿರಿಯರು ಒಗ್ಗೂಡಿ ಸಂಪ್ರದಾಯ ಹಾಗೂ ಸಂಸ್ಕೃತಿಯನ್ನು ಉಳಿಸಿ ಮುಂದಿನ ಪೀಳಿಗೆಗೆ ಕೊಂಡೊಯ್ಯಬೇಕು. ದೇಶಾದ್ಯಂತ ವಿವಿಧ ಕಾರ್ಯಕ್ಷೇತ್ರಗಳಲ್ಲಿ ಶ್ರಮಿಸುವ ಕುಶಲಕರ್ಮಿಗಳು ವಿಶ್ವಕರ್ಮ ಜಯಂತಿಯಂದು ಭಗವಾನ್ ವಿಶ್ವಕರ್ಮನನ್ನು ಭಕ್ತಿಭಾವದಿಂದ ಆರಾಧಿಸುತ್ತಿದ್ದಾರೆ. ಕಲೆ ಮತ್ತು ವಾಸ್ತುಶಿಲ್ಪದ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ವಿಶ್ವಕರ್ಮ ಸಮುದಾಯ ನೀಡಿರುವ ಕೊಡುಗೆ ಅಪಾರವಾಗಿದೆ ಎಂದು ಸ್ಮರಿಸಿದರು.**

**ಜಯಂತಿ ಕಾರ್ಯಕ್ರಮದ ಅಂಗವಾಗಿ ನಗರದಲ್ಲಿ ಸಂಭ್ರಮದ ಮೆರವಣಿಗೆ ನಡೆಯಿತು. ವಿವಿಧ ಸಾಂಸ್ಕೃತಿಕ ಕಲಾತಂಡಗಳು ಭಾಗವಹಿಸಿ ಮೆರವಣಿಗೆಗೆ ಮೆರಗು ನೀಡಿದವು. ಮೆರವಣಿಗೆಯು ನಗರದ ಕಾಳಿಕಾ ಕಮಟೇಶ್ವರ ದೇವಸ್ಥಾನದಿಂದ ಆರಂಭವಾಗಿ ಬೆಂಗಳೂರು ರಸ್ತೆ- ಹಳೇ ಬ್ರೂಸ್‌ಪೇಟೆ ಪೊಲೀಸ್ ಠಾಣೆ- ತೇರು ಬೀದಿ- ಹೆಚ್‌ಆರ್ ಗವಿಯಪ್ಪ ವೃತ್ತದ ಮಾರ್ಗವಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆಗೆ ತಲುಪಿ ಅಂತ್ಯಗೊಂಡಿತು.**

ಕಾರ್ಯಕ್ರಮದಲ್ಲಿ ಬಳ್ಳಾರಿಯ ಅನ್ನಪೂರ್ಣ ತಂಡದ ವತಿಯಿಂದ ಭಕ್ತಿ ಸಂಗೀತ ಕಾರ್ಯಕ್ರಮ ನಡೆಯಿತು. ಇದಕ್ಕೂ ಮುನ್ನ ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಲಾಯಿತು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತ್ಯಧಿಕ ಅಂಕ ಗಳಿಸಿದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಮತ್ತು ಮೂರ್ತಿ ಶಿಲ್ಪಿಕಾರರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ, ಬಳ್ಳಾರಿ ಜಿಲ್ಲಾ ವಿಶ್ವಕರ್ಮ ವಿಕಾಸ ವೇದಿಕೆಯ ಅಧ್ಯಕ್ಷ ಚಂದ್ರಕಾಂತ್ ಸ. ಸೋನಾರ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು, ವಿಶ್ವಕರ್ಮ ಸಮಾಜದ ಮುಖಂಡರು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ರೈತರ ಸಾಲ ಮನ್ನಾಕ್ಕೆ ಡಿಸಿಗೆ ಒತ್ತಾಯ

ಹೊಸಪೇಟೆ :ವಿಜಯನಗರ ಜಿಲ್ಲೆಯಲ್ಲಿ ಮುಂಗಾರು ಕೈಕೊಟ್ಟಿರುವುದರಿಂದ ಬರಗಾಲ ವ್ಯಾಪಿಸಿ, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದರಿಂದ ರಾಜ್ಯ ಸರ್ಕಾರ ರೈತರ ಎಲ್ಲಾ ಸಾಲಗಳನ್ನು ಮನ್ನಾ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ವಿಜಯನಗರ ಜಿಲ್ಲಾ ಕೃಷಿಕ ಸಮಾಜ ಒತ್ತಾಯಿಸಿದೆ. ಈ ಕುರಿತು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಅವರಿಗೆ ಜಿಲ್ಲಾ ಕೃಷಿಕ ಸಮಾಜದ ಪದಾಧಿಕಾರಿಗಳು ಮನವಿಪತ್ರ ಸಲ್ಲಿಸಿದರು. ವಿಜಯನಗರ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ತಾಲೂಕುಗಳು ಎಂದು ಘೋಷಣೆ ಮಾಡುವಂತೆ, ಹಿಂಗಾರು ಬೆಳೆಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ಉಚಿತವಾಗಿ ನೀಡುವಂತೆ, ಒತ್ತಾಯಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



# ಅನ್ನಪೂರ್ಣಗೆ ಸಚಿವ ಸ್ಥಾನ ಸಿಗುವ ವಿಶ್ವಾಸ: ಈ. ತುಕಾರಾಮ್ ಹೇಳಿಕೆ



ಬಳ್ಳಾರಿ : ರಾಜ್ಯ ಸಚಿವ ಸಂಪುಟದಲ್ಲಿ ಸಂಡೂರು ಶಾಸಕಿ ಅನ್ನಪೂರ್ಣ ಅವರಿಗೆ ಸಚಿವ ಸ್ಥಾನ ದೊರೆಯುವ ವಿಶ್ವಾಸವಿದೆ ಎಂದು ಬಳ್ಳಾರಿ ಸಂಸದ ಈ. ತುಕಾರಾಮ್ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲೂ ಸಚಿವ ಸಂಪುಟದಲ್ಲಿ ಮಹಿಳಾ ಪ್ರಾತಿನಿಧ್ಯದ ವಿಚಾರ ಚರ್ಚೆಯಾಗಿದೆ ಎಂದು ತಿಳಿಸಿದರು.

ರಾಜ್ಯ ಸಚಿವ ಸಂಪುಟದಲ್ಲಿ ಮಹಿಳಾ ಶಾಸಕರಿಗೆ ಪ್ರಾತಿನಿಧ್ಯ ನೀಡುವ ವಿಚಾರಕ್ಕೆ ಸಂಬಂಧಿಸಿದಂತೆ ಸುರ್ಜೇವಾಲ ಅವರು ಸೆಪ್ಟೆಂಬರ್ 17ರಂದು ಪ್ರತಿಕ್ರಿಯಿಸಿದ್ದು, ಒಂದಕ್ಕಿಂತ ಹೆಚ್ಚು ಮಹಿಳಾ ಆಕಾಂಕ್ಷಿಗಳಿದ್ದ ಕಾರಣ ಈ ಹಿಂದೆ ಯಾರನ್ನೂ ಅಂತಿಮಗೊಳಿಸಲು ಸಾಧ್ಯವಾಗಿರಲಿಲ್ಲ. ಮಹಿಳಾ ಸಚಿವರ ನೇಮಕದ ವಿಚಾರವನ್ನು ಶೀಘ್ರದಲ್ಲೇ ಬಗೆಹರಿಸಲಾಗುವುದು ಎಂದು ಹೇಳಿದ್ದಾರೆ.

ಈ ಹಿನ್ನೆಲೆಯಲ್ಲಿ ಅನ್ನಪೂರ್ಣ ಅವರ ಹೆಸರು ಮತ್ತೊಮ್ಮೆ ಸಚಿವ ಸ್ಥಾನದ ಚರ್ಚೆಯಲ್ಲಿ ಮುನ್ನೆಲೆಗೆ ಬಂದಿದೆ. ಈ ಹಿಂದೆ ಕೂಡ ಸಚಿವ ಸಂಪುಟದಲ್ಲಿ ಮಹಿಳಾ ಪ್ರಾತಿನಿಧ್ಯ ಕಲ್ಪಿಸುವ ಸಂದರ್ಭದಲ್ಲಿ ಸಂಡೂರು ಶಾಸಕಿ ಅನ್ನಪೂರ್ಣ ಅವರ ಹೆಸರನ್ನು ಪರಿಗಣಿಸಲಾಗುತ್ತಿದೆ ಎಂದು ಹಲವು ವರದಿಗಳು ಉಲ್ಲೇಖಿಸಿದ್ದವು. ಆದರೆ ಅಂತಿಮ ನಿರ್ಧಾರವನ್ನು ಕಾಂಗ್ರೆಸ್ ಹೈಕಮಾಂಡ್ ಕೈಗೊಳ್ಳಬೇಕಿದೆ.

ಈ. ತುಕಾರಾಮ್ ಅವರು ಸಚಿವ ಸ್ಥಾನದ ವಿಚಾರಕ್ಕೆ ಶೀಘ್ರದಲ್ಲೇ ಇತಿಶ್ರೀ ಹಾಡಿ, ಮುಂದಿನ ದಿನಗಳಲ್ಲಿ ಜಿಲ್ಲೆಯ ಅಭಿವೃದ್ಧಿ ಕಾರ್ಯಗಳತ್ತ ಗಮನ ಹರಿಸಲಾಗುವುದು ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

'ಬಳ್ಳಾರಿ ಚಲೋ' ಕುರಿತು ಟೀಕೆ : ಇದೇ ವೇಳೆ ಬಿಜೆಪಿ ಹಮ್ಮಿಕೊಂಡಿದ್ದ 'ಬಳ್ಳಾರಿ ಚಲೋ' ಪಾದಯಾತ್ರೆ ಕುರಿತು ಈ. ತುಕಾರಾಮ್ ಟೀಕೆ ವ್ಯಕ್ತಪಡಿಸಿದರು. ಬಿಜೆಪಿ ಸೆಪ್ಟೆಂಬರ್ 2ರಿಂದ ರಾಯಚೂರು ಜಿಲ್ಲೆಯ ಲಿಂಗಸುಗೂರಿನಿಂದ ಬಳ್ಳಾರಿವರೆಗೆ ಸುಮಾರು 170 ಕಿ.ಮೀ. ದೂರದ 10 ದಿನಗಳ ಪಾದಯಾತ್ರೆ ನಡೆಸಿತ್ತು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಪ್ರಕರಣ ಸೇರಿದಂತೆ ವಿವಿಧ ಆರೋಪಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಬಿಜೆಪಿ ಈ ಪಾದಯಾತ್ರೆ ಆಯೋಜಿಸಿತ್ತು.

ಪಾದಯಾತ್ರೆಯ ಕುರಿತು ಮಾತನಾಡಿದ ತುಕಾರಾಮ್, 'ಪಾಪ ತೊಳೆದುಕೊಳ್ಳುವ ಯಾತ್ರೆ' ಎಂದು ವ್ಯಂಗ್ಯವಾಡಿದರು. ಪಾದಯಾತ್ರೆಯಿಂದ ನಿರೀಕ್ಷಿತ ರಾಜಕೀಯ ಫಲ ದೊರೆಯಲಿಲ್ಲ ಎಂಬುದು ತಮ್ಮ ಅಭಿಪ್ರಾಯ ಎಂದು ಅವರು ಹೇಳಿದರು. ಇದ–ಕ್ಕೆ ಮುನ್ನ ಮಾಜಿ ಸಚಿವ ಬಿ. ನಾಗೇಂದ್ರ ಕೂಡ 'ಬಳ್ಳಾರಿ ಚಲೋ' ಕುರಿತು ವ್ಯಂಗ್ಯವಾಡಿದ್ದರು. ಬಿಜೆಪಿ ಪಾದಯಾತ್ರೆ ವಿಷಯಾಧಾರಿತ ಹೋರಾಟಕ್ಕಿಂತ ದೈಹಿಕ ವ್ಯಾಯಾಮದಂತಾಗಿದೆ ಎಂದು ಅವರು ಟೀಕಿಸಿದ್ದರು.

ನಾಗೇಂದ್ರ ಪ್ರಕರಣದ ಕುರಿತು ತುಕಾರಾಮ್ ಹೇಳಿಕೆ : ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಪ್ರಕರಣದ ಕುರಿತು ಮಾತನಾಡಿದ ಈ. ತುಕಾರಾಮ್, ಶಾಸಕ ಬಿ. ನಾಗೇಂದ್ರ ಅವರಿಗೆ ಪ್ರಕರಣದಲ್ಲಿ ಯಾವುದೇ ಪಾತ್ರವಿಲ್ಲ ಎಂದು ಹೇಳಿದ್ದಾರೆ.




# ಮಂಗಳಗೌರಿಯಾದ ಮಾಲಾಶ್ರೀ-ರುಕ್ಮಿಣಿ ವಸಂತ್



ಕನಸಿನರಾಣಿ ಮಾಲಾಶ್ರೀ ಹಾಗೂ ರುಕ್ಮಿಣಿ ವಸಂತ್ ಮಂಗಳ ಗೌರಿಯಾಗಿ ಪ್ರೇಕ್ಷಕರ ಮುಂದೆ ಬರಲಿದ್ದಾರೆ, ರಾಹುಲ್ ಪಿಕೆ ನಿರ್ದೇಶನದ ಈ ಚಿತ್ರವನ್ನು ಕೆವಿಎನ್ ಪ್ರೊಡಕ್ಷನ್ಸ್ ಮತ್ತು ದಾಕ್ಷಾಯಣಿ ಟಾಕೀಸ್ ಜಂಟಿಯಾಗಿ ನಿರ್ಮಿಸುತ್ತಿವೆ. ವೆಂಕಟ್ ಕೆ.ನಾರಾಯಣ್ ನೇತೃತ್ವದ ಕೆವಿಎನ್ ಪ್ರೊಡಕ್ಷನ್ಸ್ ಈಗಾಗಲೇ ಪ್ಯಾನ್ ಇಂಡಿಯಾ ಚಿತ್ರಗಳಾದ ಟಾಕ್ಸಿಕ್, ಜನನಾಯಗನ್ ಬಾಲನ್‌ನಂಥ ಚಿತ್ರಗಳನ್ನು ತೆರೆಗೆ ತಂದಿದೆ, ಬರಹಗಾರ-ನಿರ್ದೇಶಕ ಹೇಮಂತ್ ಎಂ.ರಾವ್ ತಮ್ಮ ತಾಯಿ ಹೆಸರಿನಲ್ಲಿ ಸ್ಥಾಪಿಸಿದ ದಾಕ್ಷಾಯಣಿ ಟಾಕೀಸ್, ಅಜ್ಞಾತವಾಸಿ ಸೇರಿದಂತೆ ಹಲವು ಚಿತ್ರಗಳನ್ನು ನಿರ್ಮಿಸಿದ್ದು, ಮಂಗಳಗೌರಿ ಚಿತ್ರದ ಮೂಲಕ ಚೊಚ್ಚಲ ಜಂಟಿ ಪಾಲುದಾರಿಕೆಗೆ ಮುನ್ನುಡಿ ಬರೆದಿವೆ. ಈ ಚಿತ್ರದಲ್ಲಿ ಹಿರಿಯನಟಿ ಮಾಲಾಶ್ರೀ ಈವರೆಗೂ ಕಂಡಿರದ ಹೊಸ ಅವತಾರದಲ್ಲಿ ಪ್ರೇಕ್ಷಕರ ಮುಂದೆ ಬರಲಿದ್ದಾರೆ, ತಮ್ಮ ಸಹಜಾಭಿನಯದ ಮೂಲಕ ಪ್ಯಾನ್-ಇಂಡಿಯಾ ಮಟ್ಟದಲ್ಲಿ ಸದ್ದು ಮಾಡುತ್ತಿರುವ ಬೆಡಗಿ ರುಕ್ಮಿಣಿ ವಸಂತ್, ಮಾಲಾಶ್ರೀ ಜೊತೆ ಸಮಬಲದ ಪಾತ್ರದಲ್ಲಿ ಮಿಂಚಲಿದ್ದಾರೆ.

ಈ ಚಿತ್ರಕ್ಕೆ ತಾಂತ್ರಿಕವಾಗಿಯೂ ಬಲಿಷ್ಠ ತಂಡವೇ ಸಾಥ್ ನೀಡಿ-ದ್ದು, ಮಿಥುನ್ ಮುಕುಂದನ್ ಅವರು ಸಂಗೀತ ಸಂಯೋಜನೆ ಮಾಡುತ್ತಿದ್ದಾರೆ. ಇಬ್ಬರು ಪ್ರಮುಖ ಮಹಿಳಾಪಾತ್ರಗಳ ನಡುವಿನ ರೋಚಕ ಪಯಣವನ್ನೊಳಗೊಂಡ ಈ ಚಿತ್ರಕ್ಕೆ ಶ್ರೀವತ್ಸನ್ ಸೆಲ್ವರಾಜನ್ ಕ್ಯಾಮೆರಾವರ್ಕ್ ನಿಭಾಯಿಸುತ್ತಿದ್ದು, ವಿಕ್ರಮ್ ಮೋರ್ ಸಾಹಸ ನಿರ್ದೇಶನ ಮಾಡುತ್ತಿದಾರೆ. ಸದ್ಯ ಚಿತ್ರದ ಶೂಟಿಂಗ್ ಮುಕ್ತಾಯಹಂತ ತಲುಪಿದೆ,

# ಸರ್ಚ್ ಒಂದೇ ರಾತ್ರಿ ಥ್ರಿಲ್ಲರ್ ಕಥೆ






ಹಿರಿಯ ನಿರ್ದೇಶಕ ಎಸ್.ನಾರಾಯಣ್ ಅವರ ಪುತ್ರ ಪಂಕಜ್ ನಾರಾಯಣ್ ಈಗ ಸಸ್ಪೆನ್ಸ್ ಥ್ರಿಲ್ಲರ್ ಚಿತ್ರದೊಂದಿಗೆ ಮರಳಿದ್ದಾರೆ. ವೈ.ಬಿ.ರಮೇಶ್ ಕೋಟೆ ನಿರ್ದೇಶನದ ಸರ್ಚ್ ಹೆಸರಿನ ಈ ಚಿತ್ರದ ಮುಹೂರ್ತ ಸಮಾರಂಭ ಲಕ್ಷ್ಮೀವೆಂಕಟೇಶ್ವರ ದೇವಸ್ಥಾನದಲ್ಲಿ ನೆರವೇರಿತು. ಸಾಹಿತಿ ಡಾ.ವಿ.ನಾಗೇಂದ್ರಪ್ರಸಾದ್ ಅವರು ಪ್ರಥಮ ದೃಶ್ಯಕ್ಕೆ ಕ್ಲ್ಯಾಪ್ ಮಾಡಿದರೆ, ನಟ ಶ್ರೀನಗರ ಕಿಟ್ಟಿ ಕ್ಯಾಮರಾ ಚಾಲನೆ ಮಾಡಿದರು. ಈ ಚಿತ್ರದಲ್ಲಿ ಪಂಕಜ್ ಜೋಡಿಯಾಗಿ ನಟಿ ಧಾಮಿಸಿ ನಟಿಸುತ್ತಿದ್ದಾರೆ. ಈ ವೇಳೆ ನಟ ಪಂಕಜ್ ಮಾತನಾಡಿ, "ಉಗ್ರಂ ಮುರಳಿ ಅವರು ಈಗಾಗಲೇ ಚಿತ್ರದ ಟೈಟಲ್ ಲಾಂಚ್ ಮಾಡಿಕೊಟ್ಟರು. ನಾನು ಈ ಚಿತ್ರ ಒಪ್ಪಲು ಕಥೆಯೇ ಪ್ರಮುಖ ಕಾರಣ. ಒಂದೇ ವಿಷಯವನ್ನು ತಲೆಯಲ್ಲಿಟ್ಟುಕೊಂಡು ಚಾಲೆಂಜ್ ಆಗಿ ಹುಡುಕಾಟ ನಡೆಸುವ ವಿಭಿನ್ನ ವ್ಯಕ್ತಿಯ ಪಾತ್ರ ನನ್ನದು. ನಮ್ಮ ತಂದೆಯ ಮಾತಿನಂತೆ ಪ್ರತಿ ಸಿನಿಮಾಗಾಗಿ ಕೂಡ ನಾನು ಸಮರ್ಪಣಾಭಾವದಿಂದ ಕೆಲಸ ಮಾಡುತ್ತೇನೆ. ಆದರೆ ಈಬಾರಿ ಈ ಹಿಂದೆಂದೂ ಮಾಡಿರದಂಥ ಪಾತ್ರ ಲಭಿಸಿರುವುದು ಮಾತ್ರ ನಿಜ. ಅದರಲ್ಲೂ ನಿರ್ದೇಶಕ ರಮೇಶ್ ಅವರು ಕಲಾವಿದರಿಂದ ಏನು ಬೇಕೋ ಅವರಿಂದ ಕೆಲಸ ತೆಗೆಸಬಲ್ಲವರು. ಹಾಗಾಗಿ ಸಹಜವಾಗಿಯೇ ನಿರೀಕ್ಷೆಗಳಿವೆ ಎಂದರು.

# ತೆರೆಮೇಲೆ ಭಾರತರತ್ನ ಎಂ.ಎಸ್.ಸುಬ್ಬುಲಕ್ಷ್ಮಿ ಬಯೋಪಿಕ್








ದಶಕಗಳ ಕಾಲ ತಮ್ಮ ದೈವಿಕ ಕಂಠದ ಮೂಲಕ ವಿಶ್ವದಾದ್ಯಂತ ಕೇಳುಗರನ್ನು ಮಂತ್ರಮುಗ್ಧಗೊಳಿಸಿದ ಭಾರತದ ಶ್ರೇಷ್ಠ ಗಾಯಕಿ ಎಂ.ಎಸ್.ಸುಬ್ಬುಲಕ್ಷ್ಮಿ ಅವರ ಜೀವನಾಧಾರಿತ ಪ್ಯಾನ್ ಇಂಡಿಯಾ ಚಿತ್ರಕ್ಕೆ ಚಾಲನೆ ದೊರೆತಿದೆ. ಕನ್ನಡತಿ ರಶ್ಮಿಕಾ ಮಂದಣ್ಣ, ಎಂ.ಎಸ್.ಸುಬ್ಬುಲಕ್ಷ್ಮಿ ಅವರ ಪಾತ್ರವನ್ನು ನಿರ್ವಹಿಸಲಿದ್ದು, ಗೌತಮ್ ತಿನ್ನನೂರಿ ಚಿತ್ರಕ್ಕೆ ಆಕ್ಷನ್‌ಕಟ್ ಹೇಳಲಿದ್ದಾರೆ. ಅನಿರುದ್ ರವಿಚಂದರ್ ಅವರ ಸಂಗೀತ ಈ ಚಿತ್ರಕ್ಕಿದೆ. ಅಲ್ಲು ಅರವಿಂದ್, ರಾಕ್ಲೈನ್ ವೆಂಕಟೇಶ್ ಹಾಗೂ ಬನ್ನಿವಾಸು ಸೇರಿ ಈ ಚಿತ್ರ ನಿರ್ಮಿಸುತ್ತಿದ್ದಾರೆ.

ಎಂ.ಎಸ್.ಸುಬ್ಬುಲಕ್ಷ್ಮಿ ಅವರ 110ನೇ ಜನ್ಮ ವಾರ್ಷಿಕೋತ್ಸವದ ಸಂದರ್ಭದಲ್ಲಿ ಚೆನ್ನೈನಲ್ಲಿ ಈ ಚಿತ್ರದ ಮುಹೂರ್ತ ನಡೆಯಿತು, ಕಮಲ್‌ಹಾಸನ್, ರಶ್ಮಿಕಾ ಮಂದಣ್ಣ ಅಭಿನಯದ ಪ್ರಥಮದೃಶ್ಯಕ್ಕೆ ಕ್ಲಾಪ್ ಮಾಡುವ ಮೂಲಕ ಚಿತ್ರದ ಶೂಟಿಂಗ್‌ಗೆ ಚಾಲನೆ ದೊರೆಯಿತು. ಈ ಸಂದರ್ಭದಲ್ಲಿ ಎಂ.ಎಸ್.ಸುಬ್ಬುಲಕ್ಷ್ಮಿ ಅವರ ಕುಟುಂಬದ ಸದಸ್ಯರು ಹಾಗೂ ಚಿತ್ರರಂಗದ ಹಲವು ಗಣ್ಯರು ಉಪಸ್ಥಿತರಿದ್ದರು.

ನಿರ್ಮಾಪಕ ರಾಕ್ಲೈನ್ ವೆಂಕಟೇಶ್ ಮಾತನಾಡಿ, ಈ ಚಿತ್ರ ನಮ್ಮೆಲ್ಲರ ಹಲವು ವರ್ಷಗಳ ಕನಸು. ಈ ಯೋಜನೆಯ ಹಿಂದೆ ಏಳೆಂಟು ವರ್ಷಗಳ ಪರಿಶ್ರಮ ಹಾಗೂ ಸಂಶೋಧನೆ ಅಡಗಿದೆ. ಸುಬ್ಬುಲಕ್ಷ್ಮಿ ಅವರ ಪಾತ್ರಕ್ಕೆ ಸೂಕ್ತ ಕಲಾವಿದರನ್ನು ಆಯ್ಕೆ ಮಾಡುವುದು ದೊಡ್ಡ ಸವಾಲಾಗಿತ್ತು. ಇಂತಹ ಪ್ರತಿಷ್ಠಿತ ವ್ಯಕ್ತಿತ್ವಕ್ಕೆ ನ್ಯಾಯ ಒದಗಿಸಲು ಯಾರು ಸೂಕ್ತರು ಎಂದು ಸಾಕಷ್ಟು ಚರ್ಚೆ ನಡೆಸಿ, ಅಂತಿಮವಾಗಿ ರಶ್ಮಿಕಾ ಮಂದಣ್ಣ ಅವರನ್ನು ಒಮ್ಮತದಿಂದ ಸೆಲೆಕ್ಟ್ ಮಾಡಿದೆವು ಎಂದರು.

ನಾಯಕಿ ರಶ್ಮಿಕಾ ಮಂದಣ್ಣ ಮಾತನಾಡಿ, ಒಬ್ಬ ನಟಿಯಾಗಿ ಇಂತಹ ಅದ್ಭುತ ಅವಕಾಶ ದೊರೆತಿರುವುದಕ್ಕೆ ನನ್ನ ಹೃದಯ ತುಂಬಿಬಂದಿದೆ. ಸುಬ್ಬುಲಕ್ಷ್ಮಿ ಅವರ ಅಸಾಧಾರಣ ಜೀವನಪಯಣದ ಸಣ್ಣ ಭಾಗವಾಗಲು ಅವಕಾಶ ದೊರೆತಿರುವುದಕ್ಕೆ ನನಗೆ ಅಪಾರ ಹೆಮ್ಮೆ ಹಾಗೂ ಗೌರವವಿದೆ. ಈ ಚಿತ್ರದ ಪಯಣದುದ್ದಕ್ಕೂ ಅವರ ಆಶೀರ್ವಾದ ಸದಾ ನಮ್ಮೊಂದಿಗಿರುತ್ತದೆ ಎಂಬ ನಂಬಿಕೆಯಿದೆ. ಈ ಪಾತ್ರವನ್ನು ಎಲ್ಲರೂ ಮೆಚ್ಚುವ ರೀತಿ ತೆರೆಮೇಲೆ ಮೂಡಿಸಲು ಎಲ್ಲಾ ಪ್ರಯತ್ನಗಳನ್ನೂ ಮಾಡುತ್ತೇನೆ' ಎಂದರು.

ಅಲ್ಲು ಅರವಿಂದ್ ಮಾತನಾಡಿ ಸುಬ್ಬುಲಕ್ಷ್ಮಿ ಅವರೇ ಈ ಚಿತ್ರ ನಿರ್ಮಿಸಲು ನಮ್ಮನ್ನು ಆಯ್ಕೆ ಮಾಡಿಕೊಂಡಿದ್ದಾರೆ, ಅವರನ್ನು ತೆರೆಮೇಲೆ ಪ್ರತಿನಿಧಿಸಲು ರಶ್ಮಿಕಾರನ್ನು ಸಹ ಅವರೇ ಆಯ್ಕೆ ಮಾಡಿಕೊಂಡಿದ್ದಾರೆ. ನಿರ್ದೇಶಕರು ಇಡೀವರ್ಷ ಪ್ರವಾಸ ಮಾಡಿ, ಸುಬ್ಬುಲಕ್ಷ್ಮಿ ಅವರ ಜೀವನದ ಕುರಿತು ಸಾಕಷ್ಟು ಸಂಶೋಧನೆ ನಡೆಸಿದ್ದಾರೆ ಎಂದರು.

# ಮಧು ಮಂದಗೆರೆ ನಟನೆಯ ಆರ್‌ಪಿಎಫ್




ಈಗ ಎಲ್ಲೆಡೆ 'ಎಐ'ನದ್ದೇ ಕಾರುಬಾರು. ಈ ತಂತ್ರಜ್ಞಾನದಿಂದ ಸಾಧ್ಯವಾಗದ್ದು ಯಾವುದೂ ಇಲ್ಲ. ಈಗ ಇದೇ ತಂತ್ರಜ್ಞಾನ ಬಳಸಿಕೊಂಡು "ಆರ್‌ಪಿಎಫ್" ಎಂಬ ವೆಬ್‌ಸಿರೀಸ್ ನಿರ್ಮಾಣವಗುತ್ತಿದೆ. ರಾಯರ ಕೃಪೆಯಿಂದ ತಶ್ವಿಶೈವಿ ಪ್ರೊಡಕ್ಷನ್ ಲಾಂಛನದಲ್ಲಿ ಮಧು ಮಂದಗೆರೆ ಅವರು ನಟಿಸಿ, ನಿರ್ಮಿಸುತ್ತಿರುವ ಈ ವೆಬ್ ಸರಣಿಯನ್ನು ಮಾದೇಶ್ ಆರಾಧ್ಯ ಅವರು ನಿರ್ದೇಶಿಸುತ್ತಿದ್ದು, ಮಧು ಮಂದಗೆರೆ ನಾಯಕನಾಗಿ ನಟಿಸುತ್ತಿದ್ದಾರೆ. ಇತ್ತೀಚೆಗೆ ಈ ವೆಬ್ ಸರಣಿಯ ಟೀಸರ್ ಬಿಡುಗಡೆ ಹಾಗೂ ಪತ್ರಿಕಾಗೋಷ್ಠಿ ನಡೆಯಿತು.

ನಿರ್ದೇಶಕ ಮಾದೇಶ್ ಆರಾಧ್ಯ ಮಾತನಾಡುತ್ತ ಮಧು ಮಂದಗೆರೆ ಅವರ ವೃತ್ತಿಜೀವನದಲ್ಲಿ ನಡೆದಂಥ ನೈಜ ಘಟನೆಯೊಂದನ್ನು ಆಧಾರವಾಗಿಟ್ಟುಕೊಂಡು ಮಾಡುತ್ತಿರುವ ವೆಬ್‌ಸೀರೀಸ್ ಇದಾಗಿದೆ. ಇದರ ವಿಶೇಷತೆ ಏನೆಂದರೆ ಈ ವೆಬ್ ಸಿರೀಸ್ ಅನ್ನು ಎಐ ತಂತ್ರಜ್ಞಾನ ಬಳಸಿಕೊಂಡು ಮಾಡುತ್ತಿದ್ದೇವೆ. ಕಲಾವಿದರ ಅಭಿನಯ ಮಾತ್ರ ನೈಜವಾಗಿರುತ್ತದೆ. ಉಳಿದಿದ್ದು ಎಐ ತಂತ್ರಜ್ಞಾನದ್ದೇ ಆಗಿರುತ್ತದೆ. ಇದನ್ನು ಕೆಲವು ವರ್ಷಗಳ ಹಿಂದೆ ಸಿನಿಮಾ ಮಾಡಬೇಕು ಅಂದುಕೊಂಡೆವು ಆಗಲಿಲ್ಲ. ಈಗ ವೆಬ್‌ಸಿರೀಸ್ ಮಾಡುತ್ತಿದ್ದೇವೆ. ಮೊದಲ ಹೆಜ್ಜೆಯಾಗಿ ಇದರ ಟೀಸರ್ ರಿಲೀಸ್ ಮಾಡಿದ್ದೇವೆ. ಈಗಾಗಲೇ ಐದಾರು ಕಂತುಗಳು ಸಿದ್ದವಾಗಿದೆ. ಸಹ ಹಾಗೂ ಸಹಾಯಕ ನಿರ್ದೇಶಕನಾಗಿ ಹಲವು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ನನಗೆ ನಿರ್ದೇಶಕನಾಗಿ ಇದು ಮೊದಲ ಪ್ರಯತ್ನ ಎಂದರು.

ನಾಯಕ ಹಾಗೂ ನಿರ್ಮಾಪಕ ಮಧು ಮಂದಗೆರೆ ಮಾತನಾಡುತ್ತ ನಾನು 30 ವರ್ಷಗಳಿಂದ ಚಲನಚಿತ್ರ ಕಲಾವಿದ ಹಾಗೂ "ಆರ್‌ಪಿಎಫ್"ನಲ್ಲಿ ಕೆಲಸ ಮಾಡುತ್ತಿದ್ದೇನೆ. "ವಂಶಿ" ಸೇರಿದಂತೆ ನೂರಕ್ಕೂ ಹೆಚ್ಚಿನ ಚಿತ್ರಗಳಲ್ಲಿ ಅಭಿನಯಿಸಿದ್ದೇನೆ. ರೈಲ್ವೆ ಇಲಾಖೆಯಲ್ಲಿ ನಾನು ಕಂಡಿರುವ ನೈಜ ಘಟನೆಗಳು ಹಾಗೂ ಅಲ್ಲಿ ಅನುಭವಿಸಿರುವ ನೋವನ್ನು ಈ ವೆಬ್ ಸೀರಿಸ್ ಮೂಲಕ ಜನರಿಗೆ ತಲುಪಿಸುವ ಉದ್ದೇಶದಿಂದ ಈ ವೆಬ್ ಸರಣಿ ನಿರ್ಮಾಣ ಮಾಡುತ್ತಿದ್ದೇನೆ. ನನ್ನ ಪತ್ನಿ ವಾಣಿ ಇದಕ್ಕೆ ಸಹಕಾರ ನೀಡುತ್ತಿದ್ದಾರೆ. ಇದರಲ್ಲಿ ಬಹುತೇಕ ಎಐ ತಂತ್ರಜ್ಞಾನ ಬಳಸಿಕೊಳ್ಳುತ್ತಿರುವುದು ವಿಶೇಷ. ಸದ್ಯ ಟೀಸರ್ ಬಿಡುಗಡೆ ಮಾಡಿದ್ದೇವೆ. ಆದಷ್ಟು ಬೇಗ ಮೊದಲ ಎಪಿಸೋಡ್ ಸಹ ಬಿಡುಗಡೆ ಮಾಡುತ್ತೇವೆ. ರಾಯರ ಕೃಪೆ ಲಾಂಛನದಲ್ಲಿ ಮೂಡಿಬರುತ್ತಿರುವ ನಮ್ಮ ಮೊದಲ ಪ್ರಯತ್ನಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು.

# ಒಂದೇ ರಾತ್ರಿ ಕಥೆ 'ಜನ್ಮೋತ್ಸವ' ಟ್ರೇಲರ್



ಗಣೇಶೋತ್ಸವ ಮತ್ತು ವಿಸರ್ಜನೆಯ ಭವ್ಯಬೆಳಕಿನ ಹಿನ್ನೆಲೆಯಲ್ಲಿ, ಕೇವಲ ಒಂದೇ ರಾತ್ರಿಯಲ್ಲಿ ತೆರೆದುಕೊಳ್ಳುವ ವಿಭಿನ್ನ ಕಥಾಹಂದರ ಒಳಗೊಂಡ ಥ್ರಿಲ್ಲರ್ ಚಿತ್ರ, ಜನ್ಮೋತ್ಸವ, ರಾಮಾಚಾರಿ ಅವರ ನಿರ್ದೇಶನವಿರೋ ಈ ಚಿತ್ರದ ಟ್ರೈಲರ್ ಇತ್ತೀಚೆಗೆ ಬಿಡುಗಡೆಯಾಗಿದ್ದು, ಪ್ರೇಕ್ಷಕರಲ್ಲಿ ದೊಡ್ಡಮಟ್ಟದ ನಿರೀಕ್ಷೆಯನ್ನು ಹುಟ್ಟುಹಾಕಿದೆ. ನಂಬಿಕೆ, ಭಯ ಮತ್ತು ವಿಧಿ ಮುಖಾಮುಖಿಯಾಗುವ ಸಂಕೀರ್ಣ ಸನ್ನಿವೇಶಗಳನ್ನು ಒಳಗೊಂಡಿರುವ ಈ ಚಿತ್ರ, ಭಕ್ತಿ, ಭಾವನೆ ಹಾಗೂ ಹೈವೋಲ್ಟೇಜ್ ರೋಮಾಂಚನವನ್ನು ಬೆಳ್ಳಿತೆರೆಯ ಮೇಲೆ ಕಟ್ಟಿಕೊಡಲು ಸಜ್ಜಾಗಿದೆ.

ಈ ವೇಳೆ ಚಿತ್ರದ ಕಥಾಹಂದರ ಹಾಗೂ ಶೂಟಿಂಗ್ ಅನುಭವಗಳನ್ನು ಹಂಚಿಕೊಂಡ ನಿರ್ದೇಶಕ ರಾಮಾಚಾರಿ, ನಮ್ಮ ಚಿತ್ರದ ಕಥೆ ಕೇವಲ ಒಂದೇ ರಾತ್ರಿಯಲ್ಲಿ ನಡೆಯುವಂಥದ್ದು. ಸಂಜೆ 6ಕ್ಕೆ ಶುರುವಾಗುವ ಕಥಾನಕ ಮರುದಿನ ಬೆಳಗ್ಗೆ 6ಗಂಟೆಗೆ ಮುಕ್ತಾಯವಾಗುತ್ತದೆ. ರಾಯಚೂರಿನ ಕೆಲವೆಡೆ ಚಿತ್ರೀಕರಣ ನಡೆಸುವಾಗ ಹಲವು ಸವಾಲುಗಳು ಎದುರಾದವು. ಬೆಳಕಿನ ವ್ಯವಸ್ಥೆಯ ನಡುವೆ ಮಳೆಯ ದೃಶ್ಯದ ಅನಿವಾರ್ಯತೆ ಇತ್ತು. ಆದರೆ ಆ ಭಾಗದಲ್ಲಿ ಕೃತಕ ಮಳೆ ತರಿಸುವ ಯಂತ್ರಗಳು ಸುಲಭವಾಗಿ ಸಿಗುವುದಿಲ್ಲ. ಮೊದಲ ದೃಶ್ಯಕ್ಕಾಗಿ ಹೇಗೋ ಪಂಪ್ಸೆಟ್ ತಂದು ಕಷ್ಟಪಟ್ಟು ಶೂಟಿಂಗ್ ಮಾಡಿದೆವು ಎಂದು ಚಿತ್ರೀಕರಣದ ಕಷ್ಟಗಳನ್ನು ಮೆಲುಕು ಹಾಕಿದ್ದಾರೆ.

ಮುಂದುವರಿದು ಮಾತನಾಡುತ್ತ 'ಕಥೆಯಲ್ಲಿ ಬಿಹಾರದಿಂದ ಬಂದಿರುವ ಪಾತ್ರಗಳಿವೆ ಹಾಗೂ ಉತ್ತರ ಭಾರತದಿಂದ ಬಾಲಕಿಯೊಬ್ಬಳನ್ನು ಅಪಹರಿಸಿಕೊಂಡು ಬರುವ ಸನ್ನಿವೇಶವಿದೆ. ಪಾತ್ರಕ್ಕೆ ನೈಜತೆ ತರಲು ಹಿಂದಿ ಭಾಷಿಕ ಕಲಾವಿದರನ್ನೇ ಆಯ್ಕೆ ಮಾಡಿಕೊಳ್ಳಬೇಕಾಯಿತು. ತಾಂತ್ರಿಕ ತಂಡದಲ್ಲೂ ಹಲವರು ಸಾಥ್ ನೀಡಿದ್ದಾರೆ. ಛಾಯಾಗ್ರಾಹಕ ವಿಜಯ್ ಮಿಶ್ರಾ, ಅವರು ಇನ್ಸ್ಟಾಗ್ರಾಮ್ ಮೂಲಕ ಪರಿಚಯವಾದರು' ಎಂದು ಹೇಳಿದರು.

ಮಾರುತಿ ಪಿಕ್ಚರ್ಸ್ ಮತ್ತು ರೈಟ್ವಾಯ್ ಫಿಲಂಸ್ ಬ್ಯಾನರ್‌ನಡಿ ಹರಿವರ್ಧನ್, ಪವನ್ ಆಚಾರ್, ವಿಜಯ್ ಮಿಶ್ರಾ ಹಾಗೂ ತ್ರಿಶೂಲ್‌ಕುಮಾರ್ ನಾಯಕ್ ಜಂಟಿಯಾಗಿ ನಿರ್ಮಿಸಿರುವ ಈ ಚಿತ್ರಕ್ಕೆ ರಾಮಾಚಾರಿ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಗಾರ ವೆಂಕಟೇಶ್, ರಮೇಶ್ ಬಾದರದಿನ್ನಿ ಮತ್ತು ರಾಕೇಶ್ ಮಂದಕರ್ ಸಹನಿರ್ಮಾಪಕರಾಗಿ ಹಾಗೂ ಪ್ರಸನ್ನ, ಉಪೇಂದ್ರ ಕಾರ್ಯಕಾರಿ ನಿರ್ಮಾಪಕರಾಗಿ ಸಾಥ್ ನೀಡಿದ್ದಾರೆ. ವಿಜಯ್ ಮಿಶ್ರಾ ಅವರ ಛಾಯಾಗ್ರಹಣ, ಮಂಜುನಾಥ ನಾಗಬಾ ಅವರ ಸಂಕಲನ ಹಾಗೂ ಪ್ರದ್ಯೋತನ್ ಅವರ ಸಂಗೀತ ಜನ್ಮೋತ್ಸವ ಚಿತ್ರಕ್ಕಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.